ಸಂಪುಟ : 10 ಸಂಚಿಕೆ: 275 ಪುಟ : 4+2 ಬೆಲೆ: 3.00 ಮಂಗಳವಾರ ಡಿಸೆಂಬರ್ 16 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 275 Pages : 4+2 Price : 3.00 Tuesday December 16 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಶಾಮನೂರು ಶಿವಶಂಕರಪ್ಪ ನಿಧನಕ್ಕೆ ವಿಧಾನ ಸಭೆಯಲ್ಲಿ ಸಂತಾಪ ಸೂಚನೆ

# ದಾವಣಗೆರೆಯ ಅಭಿವೃದ್ಧಿಗೆ ಶಾಮನೂರು ಬೆನ್ನೆಲುಬು





ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ಪ್ರಸ್ತುತ ವಿಧಾನಸಭೆಯ ಇಬ್ಬರು ಹಿರಿಯ ಶಾಸಕರನ್ನು ಕಳೆದುಕೊಂಡಿರುವುದು ದುಃಖದ ಸಂಗತಿಯಾಗಿದೆ. ತುಂಬಾ ಗಟ್ಟಿ ವ್ಯಕ್ತಿತ್ವ ಹೊಂದ್ದದ್ದ ಶಾಮನೂರು ಶಿವಶಂಕರಪ್ಪನವರು ನೇರ ನಿಷ್ಠುರವಾದಿಯಾಗಿದ್ದರು. ಕೊನೆಯ ಕಾಲದವರೆಗೂ ಸಕ್ರಿಯ ರಾಜಕಾರಣದಲ್ಲಿ ಇರುವುದಾಗಿ ಹೇಳುತ್ತಿದ್ದರು. ದಾವಣಗೆರೆ ನಗರ ವಿದ್ಯಾಕಾಶಿ ಎಂದು ಹೆಸರು ಗಳಿಸಲು ಶಾಮನೂರು ಶಿವಶಂಕರಪ್ಪನವರು ಸ್ಥಾಪಿಸಿದ ಶಿಕ್ಷಣ ಸಂಸ್ಥೆಗಳು ಕಾರಣವಾಗಿವೆ ಎಂದರು.

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ**

ಎಲ್ಲ ರಾಜಕಾರಣಿಗಳೊಂದಿಗೆ ಆತ್ಮೀಯ ಒಡನಾಟ ಹೊಂದಿದ್ದ ಶಾಮನೂರು ಶಿವಶಂಕರಪ್ಪ ಅವರು ಅಜಾತಶತ್ರು ಎನಿಸಿದ್ದರು. ದಾವಣಗೆರೆ ಜಿಲ್ಲೆಯನ್ನು ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕವಾಗಿ ಅಭಿವೃದ್ಧಿಪಡಿಸಲು ಶಿವಶಂಕರಪ್ಪನವರ ಕೊಡುಗೆ ಅಪಾರ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬೆಳಗಾವಿ ಸುವರ್ಣ ಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದ ಸೋಮವಾರದ ವಿಧಾನ ಸಭೆ ಕಲಾಪದಲ್ಲಿ, ಸಭಾಧ್ಯಕ್ಷ ಯು.ಟಿ. ಖಾದರ್ ಶಾಸಕ ಶಾಮನೂರು ಶಿವಶಂಕರಪ್ಪ ನಿಧನಕ್ಕೆ ಸಂತಾಪ ಸೂಚಿಸಿ ಮಂಡಿಸಿದ ನಿರ್ಣಯ ಬೆಂಬಲಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿದರು.

ಎಲ್ಲರ ಜೊತೆ ಸ್ನೇಹದಿಂದ ಇರುತ್ತಿದ್ದ ಶಾಮನೂರು, ರಾಜಯಕೀಯದಲ್ಲಿ ಅಜಾತ ಶತ್ರು ಎನಿಸಿದ್ದರು. ಪ್ರತಿ ಬಾರಿ ನಾನು ದಾವಣಗೆರೆ ನಗರಕ್ಕೆ ಆಗಮಿಸಿದರೆ ಶಾಮನೂರು ಶಿವಶಂಕರಪ್ಪನವರ ಗೆಸ್ಟ್ ಹೌಸ್‌ನಲ್ಲಿ ವಾಸ್ತವ್ಯ ಮಾಡುತ್ತಿದ್ದೆ. ಆತ್ಮೀಯವಾಗಿ ಅವರ ಮನಗೆ ಊಟಕ್ಕೆ ಕರೆಯುತ್ತಿದ್ದರು. ಅವರ ಅಗಲಿಕೆ ವಯಕ್ತಿವಾಗಿ ಹಾಗೂ ರಾಜ್ಯಕ್ಕೆ ತುಂಬಲಾರದ ನಷ್ಟವಾಗಿದೆ.

ದೇಶದಲ್ಲಿಯೇ ಹಿರಿಯ ಶಾಸಕರಾಗಿದ್ದ ಶಾಮನೂರು ಶಿವಶಂಕರಪ್ಪ ಅವರು, ದೀರ್ಘ ಕಾಲ ಅಖಿಲ ಭಾರತ ವೀರಶೈವ ಮಹಾಸಭಾದ ಅಧ್ಯಕ್ಷರಾಗಿ, ಕೊನೆಯ ಉಸಿರಿನವರೆಗೂ ಕೆಲಸ ಮಾಡಿದ್ದಾರೆ. 1969ರಲ್ಲಿ ದಾವಣಗೆರೆಯಲ್ಲಿ ಪುರಸಭೆ ಸದಸ್ಯರಾಗಿ ಆಯ್ಕೆಯಾಗಿ, ಬಳಿಕ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದರು. 1994 ರಲ್ಲಿ ತಮ್ಮ 63ನೇ ವಯಸ್ಸಿನಲ್ಲಿ ಮೊದಲ ಬಾರಿಗೆ ಶಾಸಕರಾಗಿ ಆಯ್ಕೆಯಾದ ಅವರು 6 ಬಾರಿ ಶಾಸಕರಾಗಿ, ಒಂದು ಬಾರಿ ಸಂಸತ್ ಸದಸ್ಯರಾಗಿ ಸಮಾಜದ ಸೇವೆ ಸಲ್ಲಿಸಿದ್ದಾರೆ. ದಾವಣಗೆರೆ ಜಿಲ್ಲೆ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕವಾಗಿ ಮುಂದುವರೆದ್ದರೆ ಅದಕ್ಕೆ ಶಾಮನೂರು ಶಿವಶಂಕರಪ್ಪನವರು ಕಾರಣ ಎಂದರು.

ತಮ್ಮ 75ನೇ ಜನ್ಮ ದಿನಾಚರಣೆಯನ್ನು ದಾವಣಗೆರೆಯಲ್ಲಿಯೇ ಆಚರಿಸಲು ಶಾಮನೂರು ಶಿವಶಂಕರಪ್ಪನವರೇ ಕಾರಣ ಎಂಬುದನ್ನು ಸ್ಮರಿಸಿದ ಮುಖ್ಯಮಂತ್ರಿಗಳು, ಕಳೆದ 15 ದಿನಗಳ ಹಿಂದೆಯಷ್ಟೇ ಬೆಂಗಳೂರಿನ ಆಸ್ಪತ್ರೆಗೆ ಭೇಟಿ ನೀಡಿ, ಅವರನ್ನು ನೋಡಿಕೊಂಡು ಬಂದಿದ್ದೆ. ಶಾಮನೂರು ಶಿವಶಂಕರಪ್ಪನವರು ತಮ್ಮ ದೊಡ್ಡ ಕುಟುಂಬ ಮಾತ್ರವಲ್ಲದೆ, ಲಕ್ಷಾಂತರ ಅಭಿಮಾನಿಗಳನ್ನು ಅಗಲಿದ್ದಾರೆ. ಅವರ ಆತ್ಮಕ್ಕೆ ಚಿರಶಾಂತಿಯನ್ನು ಹಾಗೂ ಅವರ ಅಗಲಿಕೆಯಿಂದ ಉಂಟಾಗಿರುವ ನೋವನ್ನು ಭರಿಸುವ ಶಕ್ತಿಯನ್ನು ಭಗವಂತ ದಯಪಾಲಿಸಲಿ ಎಂದು ಪ್ರಾರ್ಥಿಸಿದರು.

ಆಹಾರ ಮತ್ತು ನಾಗರಿಕರ ಸರಬರಾಜು ಸಚಿವ ಕೆ.ಹೆಚ್. ಮುನಿಯಪ್ಪ ಮಾತನಾಡಿ, ಶಾಮನೂರು ಶಿವಶಂಕರಪ್ಪನವರು ಬಸವಣ್ಣವರ ಚಿಂತನೆಯನ್ನು ಅಳವಡಿಸಿಕೊಂಡಿದ್ದರು. ಸರ್ವರನ್ನೂ ಸಮಾನವಾಗಿ ▸▸3ನೇ ಪುಟಕ್ಕೆ

### ನರೇಗಲ್ಲದಲ್ಲಿ ಸ್ವದೇಶಿ ವಸ್ತುಗಳ ಬಳಕೆ ಜಾಗೃತಿ ಸಭೆ: ಮನೆ ಮನೆಗೆ ಪ್ರತಿಮನೆಯು ಸ್ವದೇಶಿ ಸ್ಟಿಕರ್

# ‘ಆತ್ಮನಿರ್ಭರ’ ಅಭಿಯಾನದಿಂದ ದೇಶದ ಅಭಿವೃದ್ಧಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಆತ್ಮನಿರ್ಭರ ಭಾರತ ಅಭಿಯಾನ (ಸ್ವಾವಲಂಬಿ ಭಾರತ ಅಭಿಯಾನ) ಎಂದರೆ ಭಾರತವನ್ನು ಆರ್ಥಿಕವಾಗಿ ಸ್ವಾವಲಂಬಿ ರಾಷ್ಟ್ರವನ್ನಾಗಿ ರೂಪಿಸುವ ಗುರಿ ಹೊಂದಿರುವ ಕೇಂದ್ರ ಸರ್ಕಾರದ ಒಂದು ವಿಶಾಲ ಕಾರ್ಯತಂತ್ರವಾಗಿದ್ದು, ದೇಶೀಯ ಉತ್ಪಾದನೆ, ಸ್ಥಳೀಯ ಉದ್ಯಮಗಳಿಗೆ ಬೆಂಬಲ ಮತ್ತು ಆಮದುಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಿ ವಿಶ್ವ ಮಟ್ಟದ ಪೂರೈಕೆ ಸರಪಳಿಗಳ ಕೇಂದ್ರವಾಗಿ ಭಾರತವನ್ನು ರೂಪಿಸುವುದಾಗಿದೆ ಎಂದು ಮಾಜಿ ಸಚಿವ ಕಳಕಪ್ಪ ಬಂಡಿ ಹೇಳಿದರು.

ಪಟ್ಟಣದ ಶ್ರೀ ಕಾಳಿಕಾದೇವಿ ದೇವಸ್ಥಾನದ ಸಭಾ ಭವನದಲ್ಲಿ ಸೋಮವಾರ ಬಿಜೆಪಿ ರೋಣ ಮಂಡಲ, ನರೇಗಲ್ಲ ಘಟಕದ ವತಿಯಿಂದ ಹಮ್ಮಿಕೊಂಡಿದ್ದ ಆತ್ಮನಿರ್ಭರ ಭಾರತ ಸ್ವಾವಲಂಬಿ ಭಾರತ ಅಭಿಯಾನಡಿ ಸ್ವದೇಶಿ ವಸ್ತುಗಳ ಬಳಕೆ ಜಾಗೃತಿ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೋವಿಡ್–19 ಸಾಂಕ್ರಾಮಿಕದ ಸಮಯದಲ್ಲಿ ಪ್ರಾರಂಭಿಸಲಾದ ಈ ಅಭಿಯಾನವು ಆರ್ಥಿಕತೆ, ಮೂಲಸೌಕರ್ಯ, ವ್ಯವಸ್ಥೆ, ಜನಸಂಖ್ಯಾಶಾಸ್ತ್ರ ಮತ್ತು ಬೇಡಿಕೆಯ ಐದು ಸ್ತಂಭಗಳ ಮೇಲೆ ನಿಂತಿದೆ.



ಆತ್ಮನಿರ್ಭರ ಭಾರತವು ಭಾರತವನ್ನು ತನ್ನದೇ ಆದ ಶಕ್ತಿಯಿಂದ ಜಾಗತಿಕ ವೇದಿಕೆಯಲ್ಲಿ ಬಲಿಷ್ಠ ರಾಷ್ಟ್ರವಾಗಿ ಬೆಳೆಯಲು ಸಹಾಯ ಮಾಡುವ ಒಂದು ಸಮಗ್ರ ದೃಷ್ಟಿಕೋನವಾಗಿದೆ. ಸ್ಥಳೀಯ ತಯಾರಕರು ಮತ್ತು ಸೇವಾ ಪೂರೈಕೆದಾರರ ಮೇಲೆ ಹೆಚ್ಚಿನ ಗಮನ ಹರಿಸುವ ಮೂಲಕ ರಾಷ್ಟ್ರವನ್ನು ಸ್ವಾವಲಂಬಿಯನ್ನಾಗಿ ಮಾಡುವುದು ಈ ಪರಿಕಲ್ಪನೆಯ ಕೇಂದ್ರಬಿಂದುವಾಗಿದೆ ಎಂದು ತಿಳಿಸಿದರು.

ಜಿಲ್ಲಾ ಪ್ರದಾನ ಕಾರ್ಯದರ್ಶಿ ಆರ್.ಕೆ. ಚವ್ಹಾಣ, ರೋಣ ಮಂಡಲ ಅಧ್ಯಕ್ಷ ಉಮೇಶ ಮಲ್ಲಾಪೂರ, ನಗರ ಘಟಕ ಅಧ್ಯಕ್ಷ ಉಮೇಶ ಸಂಗನಾಳಮಠ ಮಾತನಾಡಿದರು. ಇದೇ ಸಂದರ್ಭದಲ್ಲಿ ಗದಗ ಜಿಲ್ಲಾ ಕಾನಿಪ ಉಪಾಧ್ಯಕ್ಷ ಪ್ರಭುಸ್ವಾಮಿ ಅರವಟಗಿಮಠ, ಸದಸ್ಯ ನಿಂಗರಾಜ ಬೇವಿನಕಟ್ಟಿ ಅವರನ್ನು ಸನ್ಮಾನಿಸಲಾಯಿತು. ಮಾಜಿ ಅಧ್ಯಕ್ಷ ಮುತ್ತಣ್ಣ ಕಡಗದ, ಅಶೋಕ ನವಲಗುಂದ, ಶಶಿಧರ ಸಂಕನಗೌಡ್ರ, ಬಸವರಾಜ ಬೆಲ್ಲದ, ಮುತ್ತಣ್ಣ ಪಲ್ಲೇದ, ಹುಲ್ಲಪ್ಪ ಕೆಂಗಾರ, ಭೀಮಪ್ಪ ಮಾದರ, ಸಲೀಂ ಕಲಾದಗಿ, ಶಂಕಟ ಇಟಗಿ, ಬಸವರಾಜ ಕೋಟಗಿ, ಮಹೇಶ ಶಿವಶಿಂಪರ, ಸುರೇಶ ನಾಯ್ಕರ, ರುದ್ರಮುನಿ ಹಿರೇಮಠ, ನಿಂಗಪ್ಪ ಕಣವಿ, ಎಂ.ಎ. ಮಾಲಗಿತ್ತಿಮಠ, ಎಫ್.ಎ. ಕುದರಿ, ಮಂಜುನಾಥ ಕಮಲಾಪೂರ ಸೇರಿದಂತೆ ಇತರರಿದ್ದರು.

ಇದು ಆರ್ಥಿಕತೆಯನ್ನು ಬಲಪಡಿಸುತ್ತದೆ, ಜೀವನ ಮಟ್ಟವನ್ನು ಸುಧಾರಿಸುತ್ತದೆ ಮತ್ತು ಮುಖ್ಯವಾಗಿ ದೇಶದ ವ್ಯಾಪಾರ ಕೊರತೆ ಮತ್ತು ಖಜಾನೆ ಸಮತೋಲನವನ್ನು ಸುಧಾರಿಸುತ್ತದೆ. ಉತ್ಪಾದನೆಯಿಂದ ಹಿಡಿದು ಪೂರೈಕೆಯವರೆಗೆ ಎಲ್ಲಾ ಕ್ಷೇತ್ರಗಳಲ್ಲಿ ದೇಶವನ್ನು ಸ್ವಾವಲಂಬಿಯನ್ನಾಗಿ ಮಾಡುವುದು. ಇದು ದೇಶವು ಆಮದಿನ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ ಮತ್ತು ರಫ್ತಿಗೆ ಉತ್ತೇಜನ ನೀಡುತ್ತದೆ. ಆಮದು ಇಳಿಕೆಯು ವ್ಯಾಪಾರ ಕೊರತೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ ಮತ್ತು ಅಂತಿಮವಾಗಿ ವ್ಯಾಪಾರ ಹೆಚ್ಚುವರಿಗೆ ಕಾರಣವಾಗುತ್ತದೆ ಎಂದು ಕಳಕಪ್ಪ ಬಂಡಿ ಹೇಳಿದರು.

### ಭವಾನಿ ಭರತನಾಟ್ಯ, ವಿವಿಧೋದ್ದೇಶಗಳ ಸಂಸ್ಥೆಯಿಂದ ನೃತ್ಯ ಸಂಭ್ರಮ ಕಾರ್ಯಕ್ರಮ

# ಭರತನಾಟ್ಯ ನಾಡಿನ ಸಂಸ್ಕೃತಿಯ ಪ್ರತೀಕ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಭರತನಾಟ್ಯ ಕಲೆ ನಮ್ಮ ದೇಶದ ಸಾಹಿತ್ಯ, ಸಂಗೀತ, ಸಂಸ್ಕೃತಿಯ, ಪರಂಪರೆಯ ಜೀವಾಳವಾಗಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಪಟ್ಟಣದ ಭವಾನಿ ಭರತನಾಟ್ಯ ಹಾಗೂ ವಿವಿಧೋದ್ದೇಶಗಳ ಸಂಸ್ಥೆಯಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಶ್ರೀ ವೀರಗಂಗಾಧರ ಜಗದ್ಗುರುಗಳ ಕಲ್ಯಾಣ ಮಂಟಪದಲ್ಲಿ ನಡೆದ ನೃತ್ಯ ಸಂಭ್ರಮ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ನಾಡಿನ ಸಂಸ್ಕೃತಿಯ ಪ್ರತೀಕವಾದ ಭರತನಾಟ್ಯ ಭಾರತೀಯ ಸಾಂಪ್ರದಾಯಿಕ ಶ್ರೇಷ್ಠ ನೃತ್ಯ ಕಲೆಯಾಗಿದೆ. ಇದು ಮಕ್ಕಳಲ್ಲಿ ಸಂಸ್ಕಾರ, ಸಂಸ್ಕೃತಿ, ದೇವರು, ಧರ್ಮ, ಗುರುಹಿರಿಯರಲ್ಲಿ ವಿಧೇಯತೆ ಜತೆಗೆ ಮಾನಸಿಕ ದೈಹಿಕ ಆರೋಗ್ಯವನ್ನು ಬೆಳೆಸುತ್ತದೆ. ದೇಶದ ಸಂಪತ್ತಾದ ಮಕ್ಕಳಲ್ಲಿ ನಮ್ಮ ಸಾಂಪ್ರದಾಯಿಕ, ▸▸3ನೇ ಪುಟಕ್ಕೆ

## ಭಾವಪೂರ್ಣ ಶ್ರದ್ಧಾಂಜಲಿ



## ಶ್ರೀ ಬಿ. ಬಾಬು

ಜನನ : 25-01-1951 ಮರಣ : 15-12-2025

ಗದಗ ಜಿಲ್ಲಾ ಛಾಯಾಗ್ರಾಹಕ ಕ್ಷೇಮಾಭಿವೃದ್ಧಿ ಸಂಘದ ಸಂಸ್ಥಾಪಕ ಅಧ್ಯಕ್ಷರು, ಮುಂಡರಗಿ ನಗರದ ಹಿರಿಯ ಛಾಯಾಗ್ರಾಹಕರು, ರಂಗ ಕಲಾವಿದರು, ಸರಳ ಜೀವಿಗಳಾದ **ಶ್ರೀ ಬಿ. ಬಾಬು** ಅವರು ದಿನಾಂಕ 15-12-2025ರ ಸೋಮವಾರ ಸಂಜೆ 6-30ಕ್ಕೆ ನಿಧನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ಮೃತರ ಅಂತ್ಯಕ್ರಿಯು **ದಿನಾಂಕ : 16-12-2025 ರಂದು ಮಂಗಳವಾರ ಮುಂಡರಗಿ ಪಟ್ಟಣದಲ್ಲಿ ಮಧ್ಯಾಹ್ನ 1 ಘಂಟೆಗೆ** ಜರುಗಲಿದೆ..

ಇಂತಿ ದುಃಖತಪ್ತರು.

**ಗದಗ ಜಿಲ್ಲಾ ಪತ್ರಕರ್ತರು ಹಾಗೂ ಸ್ನೇಹಿತರು...**

### ಟಿಎಪಿಸಿಎಂಎಸ್‌ನಲ್ಲಿ ಪ್ರಾರಂಭಿಸಿರುವ ಗೋವಿನಜೋಳ ಖರೀದಿ ಕೇಂದ್ರದಲ್ಲಿ ಗೊಂದಲಗಳ ಸರಮಾಲೆ

# ಆಮೆಗತಿಯಲ್ಲಿ ಸಾಗುತ್ತಿದೆ ಬೆಳೆ ಖರೀದಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ರೈತರ ಹೋರಾಟದ ಫಲವಾಗಿ ಇದೇ ತಿಂಗಳು 1ರಂದು ಗೋವಿನಜೋಳ ಬೆಂಬಲ ಬೆಲೆ ಖರೀದಿ ಕೇಂದ್ರ ಪ್ರಾರಂಭವಾಗಿದ್ದು, ಗೋವಿನಜೋಳ ಬೆಂಬಲ ಬೆಲೆ ಖರೀದಿ ಕೇಂದ್ರಕ್ಕಾಗಿ ನಡೆದಿರುವ ಹೋರಾಟದಿಂದ ಅನೇಕ ಜಿಲ್ಲೆಗಳಲ್ಲಿ ಗೋವಿನಜೋಳ ಬೆಳೆದ ರೈತರಿಗೆ ಉಪಯೋಗವಾಗಿದೆ. ಆದರೆ, ಪಟ್ಟಣದಲ್ಲಿ ಟಿಎಪಿಸಿಎಂಎಸ್ ವತಿಯಿಂದ ಪ್ರಾರಂಭಿಸಿರುವ ಖರೀದಿ ಕೇಂದ್ರಕ್ಕೆ ಬರುವ ರೈತರು ನಿಯಮಗಳಿಂದ ಗೊಂದಲಕ್ಕೀಡಾಗುತ್ತಿದ್ದಾರೆ.

ಗೋವಿನಜೋಳ ಬೆಂಬಲ ಬೆಲೆ ಖರೀದಿ ಕೇಂದ್ರಕ್ಕೆ ಹೆಸರು ನೋಂದಾಯಿಸುವ ಕಾರ್ಯ ಪ್ರಾರಂಭವಾದ ಸಂದರ್ಭದಲ್ಲಿ ನೆಟ್‌ವರ್ಕ್ ಸಮಸ್ಯೆ ▸▸3ನೇ ಪುಟಕ್ಕೆ

## ವಿದೇಶದಲ್ಲಿದ್ದಾಗ ಹಿಂದೂ ಧರ್ಮದ ಕುರಿತು ಅವಹೇಳನಕಾರಿ ಪೋಸ್ಟ್; ಮಂಗಳೂರಿನ ಯುವಕ ಕೇರಳ ಏರ್‌ಪೋರ್ಟ್‌ನಲ್ಲಿ ಬಂಧನ

■ವಿಜಯಸಾಕ್ಷಿ ಸುದ್ದಿ, ಮಂಗಳೂರು

ವಿದೇಶದಲ್ಲಿದ್ದಾಗ ಹಿಂದೂ ಧರ್ಮದ ಬಗ್ಗೆ ಅವಹೇಳನಕಾರಿ ಮತ್ತು ಪ್ರಚೋದನಕಾರಿ ವಿಷಯವನ್ನು ಪೋಸ್ಟ್ ಮಾಡಿದ ಆರೋಪದ ಮೇಲೆ ಭಾರತಕ್ಕೆ ಬಂದ ವ್ಯಕ್ತಿಯನ್ನು ಬಂಧಿಸಲಾಗಿದೆ ಎಂದು ಸೋಮವಾರ ಪೊಲೀಸರು ತಿಳಿಸಿದ್ದಾರೆ ಎಂದು 'ಫ್ರೀ ಪ್ರೆಸ್ ಜರ್ನಲ್' ವರದಿ ಮಾಡಿದೆ.

ಮಂಗಳೂರಿನ ಉಲ್ಲೈಬೆಟ್ಟು ನಿವಾಸಿಯಾಗಿರುವ ಆರೋಪಿ ಅಬ್ದುಲ್ ಖಾದರ್ ನೆಹಾದ್ (27) ಸೌದಿ ಅರೇಬಿಯಾದಲ್ಲಿ ಕೆಲಸ ಮಾಡುತ್ತಿದ್ದರು ಎಂದು ಅವರು ಹೇಳಿದರು.

ಪೊಲೀಸರ ಪ್ರಕಾರ, ಅಕ್ಟೋಬರ್ 11 ರಂದು 'ಣಜಚಿಟ_ಜಹಿ_2025' ಎಂಬ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಹಿಂದೂ ಧರ್ಮಕ್ಕೆ ಸಂಬಂಧಿಸಿದ ಅವಹೇಳನಕಾರಿ ಮತ್ತು ಪ್ರಚೋದನಕಾರಿ ಪೋಸ್ಟ್ ಅನ್ನು ಅಪ್‌ಲೋಡ್ ಮಾಡಿದ ನಂತರ ಬಜ್ಪೆ ಪೊಲೀಸ್ ಠಾಣೆಯಲ್ಲಿ ಸ್ವಯಂಪ್ರೇರಿತ ಪ್ರಕರಣ ದಾಖಲಿಸಲಾಗಿದೆ.

ತನಿಖೆಯ ಸಮಯದಲ್ಲಿ, ಆ ಸಮಯದಲ್ಲಿ ಸೌದಿ ಅರೇಬಿಯಾದಲ್ಲಿ ವಾಸಿಸುತ್ತಿದ್ದ ನೆಹಾದ್ ಅವರು ಪೋಸ್ಟ್ ಅನ್ನು ಅಪ್‌ಲೋಡ್ ಮಾಡಿದ್ದಾರೆ ಎಂದು ತಾಂತ್ರಿಕ ವಿಶ್ಲೇಷಣೆಯಿಂದ ತಿಳಿದುಬಂದಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಇದರ ಆಧಾರದ ಮೇಲೆ, ಯುವಕನ ವಿರುದ್ಧ ಲುಕ್ ಔಟ್ ಸುತ್ತೋಲೆ (ಎಲ್‌ಒಸಿ) ಹೊರಡಿಸಲಾಗಿದೆ ಎಂದು ಅವರು ಹೇಳಿದರು.

ಡಿಸೆಂಬರ್ 14 ರಂದು, ನೇಹಾದ್ ವಿದೇಶದಿಂದ ಕೇರಳದ ಕ್ಯಾಲಿಕಟ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದರು.

### ಲಿಂಗಾಯತ ಪ್ರಗತಿಶೀಲ ಸಂಘದ ಶಿವಾನುಭವ ಕಾರ್ಯಕ್ರಮದಲ್ಲಿ ಶ್ರೀ ಶಾಂತಲಿಂಗ ಮಹಾಸ್ವಾಮಿಗಳು

# ವಚನಗಳಲ್ಲಿದೆ ವ್ಯಕ್ತಿತ್ವ ವಿಕಸನದ ಶಕ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ವಚನಗಳು ಜೀವನದ ಒಳನೋಟ ನೀಡಿ, ಮಕ್ಕಳನ್ನು ಜ್ಞಾನಪೂರ್ಣ, ಸಂವೇದನಾಶೀಲ ವ್ಯಕ್ತಿಯನ್ನಾಗಿ ಮಾಡುವ ಶಕ್ತಿಯನ್ನು ಹೊಂದಿವೆ. ವಚನಗಳು ಮಕ್ಕಳ ಸಮಗ್ರ ವ್ಯಕ್ತಿತ್ವ ವಿಕಸನಕ್ಕೆ ಬೇಕಾಗುವ ಎಲ್ಲಾ ಅಂಶಗಳನ್ನು ಕಲಿಸುತ್ತವೆ ಎಂದು ಪೂಜ್ಯ ಶಾಂತಲಿಂಗ ಮಹಾಸ್ವಾಮಿಗಳು ಹೇಳಿದರು.



ಲಿಂಗಾಯತ ಪ್ರಗತಿಶೀಲ ಸಂಘದ 2775ನೇ ಶಿವಾನುಭವದ ಸಮ್ಮುಖ ವಹಿಸಿ ಮಾತನಾಡಿದ ಶ್ರೀಗಳು, ತೋಂಟದಾರ್ಯ ಮಠದ ಶಿವಾನುಭವ ವೈಶಿಷ್ಟ್ಯತೆಯಿಂದ ತುಂಬಿದೆ. ಪ್ರತಿ ಸೋಮವಾರ ಜರುಗುವ ಶಿವಾನುಭವ ಸಾಹಿತ್ಯ, ಸಂಗೀತ, ಕಲೆ ಅನೇಕ ಔಚಿತ್ಯಪೂರ್ಣ ಕಾರ್ಯಕ್ರಮಗಳನ್ನು ಉಣಬಡಿಸುತ್ತಿದೆ. ಮಕ್ಕಳು ಜಗ ಬೆಳಗುವ ದೀಪಗಳು. ಇಂದು ಮಕ್ಕಳ ಬಗ್ಗೆ ಶಿವಾನುಭವ ಕಾರ್ಯಕ್ರಮ. ಮಕ್ಕಳು ಬೆಳೆಯುವಾಗಲೇ ಅವರು ಸಿರಿ ಕಾಣಬಹುದು. ಮಕ್ಕಳೆಂದರೆ ತಾಯಿಗೆ ಎಲ್ಲಿಲ್ಲದ ಪ್ರೀತಿ ಎಂದರು.

ಡಿ.ಎಸ್. ಕರ್ಕಿ ಪ್ರಶಸ್ತಿ ಪುರಸ್ಕೃತ ಯುವ ಕವಿ, ರಂಗಕರ್ಮಿ ರಣತೂರಿನ ಸಂತೋಷ ಅಂಗಡಿಯವರನ್ನು ಸನ್ಮಾನಿಸಲಾಯಿತು. ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ಮತ್ತು ಕುಮಾರ ಹಿರೇಮಠ ಇವರು ವಚನ ಸಂಗೀತ ನಡೆಸಿಕೊಟ್ಟರು. ಧರ್ಮಗ್ರಂಥ ಪಠಣವನ್ನು ಶ್ರಾವಣಿ ಡಿ.ಪಾಟೀಲ ಹಾಗೂ ವಚನ ಚಿಂತನವನ್ನು ಅದಿತಿ ಕೆ.ಇಂಗಳಳ್ಳಿ ಅವರು ಪ್ರಸ್ತುತ ಪಡಿಸಿದರು. ದಾಸೋಹ ಸೇವೆ ವಹಿಸಿದ್ದ ಕೆ.ಎಸ್. ನಾಗರಾಜ ಸೊಂಡುರ ಇವರ ಸಹೋದರಿ ಸಾವಂತ್ರವ್ವ ಪಿಳ್ಳೆ ಉಪಸ್ಥಿತರಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹ ಕಾರ್ಯದರ್ಶಿ ಸೋಮಶೇಖರ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರಮನ್ ಶಿವಾನಂದ ಹೊಂಬಳ ಸೇರಿದಂತೆ ಮಠದ ಭಕ್ತರು ಉಪಸ್ಥಿತರಿದ್ದರು.

ಸೋಮಶೇಖರ ಪುರಾಣಿಕ ಸ್ವಾಗತಿಸಿದರು. ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಪರಿಚಯಿಸಿದರು. ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.


> ಉಪನ್ಯಾಸಕರಾಗಿ ಆಗಮಿಸಿದ ಗದಗ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ರಾಜೇಂದ್ರ ಗಡಾದ ಮಾತನಾಡಿ, ಮಕ್ಕಳು ಭವಿಷ್ಯದ ಕನಸುಗಳು, ಮಕ್ಕಳನ್ನು ಸರಿದಾರಿಗೆ ತರುವ ಸಂಸ್ಕೃತಿ ಇಂಥ ಶಿವಾನುಭವದಿಂದ ಸಾಧ್ಯ. ಸತ್ಯ, ಅಹಿಂಸೆ, ನ್ಯಾಯ, ಸಮಾನತೆ, ನಂಬಿಕೆ ಇವುಗಳನ್ನು ಶರಣರು ಹಾಕಿಕೊಟ್ಟರು. ಈಗಿನ ಮಕ್ಕಳು ವಿದ್ಯಾವಂತರು, ಆದರೆ ಅವರು ವಿದೇಶದಲ್ಲಿರುತ್ತಾರೆ. ಇವರ ತಂದೆ-ತಾಯಿ ವೃದ್ಧಾಶ್ರಮದಲ್ಲಿರುತ್ತಾರೆ. ಇಂದಿನ ಮಕ್ಕಳು ಸಾಕಷ್ಟು ವಿದ್ಯಾವಂತರು, ಆದರೆ ವಿಚಾರವಂತರಲ್ಲ. ವಚನಗಳಲ್ಲಿರುವ ಮೌಲ್ಯಗಳನ್ನು ಮಕ್ಕಳು ಮನಃಪಟಲದಲ್ಲಿ ಬಿತ್ತಬೇಕು. ಮಕ್ಕಳಿಗೆ ತಿಳಿಯುವಂತ ವಿಷಯಗಳನ್ನು ಪಠ್ಯ-ಪುಸ್ತಕಗಳಲ್ಲಿ ಹಾಕಬೇಕು. ಜಗತ್ತಿಗೆ ಉತ್ತಮ ನಾಗರಿಕರಿಗಿಂತ, ಉತ್ತಮ ಮನುಷ್ಯನ ಅವಶ್ಯಕತೆ ಇದೆ ಎಂದರು.

### ಡಿ. 18ರಿಂದ 24ರವರೆಗೆ ಶ್ರೀ ಅನ್ನದಾನೇಶ್ವರ ಜಾತ್ರಾ ಮಹೋತ್ಸವ

# ರಥೋತ್ಸವ, ಸಾಂಸ್ಕೃತಿಕ ಕಾರ್ಯಕ್ರಮಗಳು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ





ಹಾಲಕೆರೆಯ ಶ್ರೀ ಅನ್ನದಾನೇಶ್ವರ ಸಂಸ್ಥಾನಮಠ 175ನೇ ಜಾತ್ರಾ ಮಹೋತ್ಸವವು ಡಿ. 18ರಿಂದ ಡಿ. 24ರವರೆಗೆ ಜರುಗಲಿದೆ. ಡಿ. 18ರ ಬೆಳಿಗ್ಗೆ 9 ಗಂಟೆಗೆ ನಿಡಗುಂದಿಕೊಪ್ಪ ಶಾಖಾ ಶಿವಯೋಗ ಮಂದಿರದ ಅಭಿನವ ಚನ್ನಬಸ ಸ್ವಾಮೀಜಿಗಳಿಂದ ಷಟಸ್ಥಲ ಧ್ವಜಾರೋಹಣದೊಂದಿಗೆ ಜಾತ್ರಾ ಮಹೋತ್ಸವಕ್ಕೆ ಅಧಿಕೃತ ಚಾಲನೆ ದೊರಕಲಿದೆ. ಡಿ. 19ರಿಂದ ಡಿ. 22ರವರೆಗೆ ಪ್ರತಿದಿನ ಸಂಜೆ 7 ಗಂಟೆಗೆ ಲಘು ರಥೋತ್ಸವ ಜರುಗಲಿದೆ.

ಡಿ. 21 ಮತ್ತು 22ರಂದು ಮರೆಯಾಗುತ್ತಿರುವ ಗ್ರಾಮೀಣ ಕ್ರೀಡೆಗಳ ಉತ್ತೇಜನಕ್ಕಾಗಿ ಭಜನಾ ಸ್ಪರ್ಧೆ ಮತ್ತು ಪಗಡೆ ಆಟದ ಸ್ಪರ್ಧೆಗಳು ಜರುಗಲಿವೆ. ಡಿ. 23ರಂದು ಮಧ್ಯಾಹ್ನ 12 ಗಂಟೆಗೆ ಮಹಾಗಣಾರಾಧನೆ, 12.30ಕ್ಕೆ ನರೇಗಲ್ಲನ ಶ್ರೀ ಅನ್ನದಾನ ವಿಜಯ ವಿದ್ಯಾಪ್ರಸಾರಕ ಸಮಿತಿಯ ವಿದ್ಯಾರ್ಥಿಗಳು ಪಾದಯಾತ್ರೆಯ ಮೂಲಕ ಹಾಲಕೆರೆಯ ಶ್ರೀಮಠಕ್ಕೆ ಆಗಮಿಸುವರು. ಹಿರಿಯ ಶಿಕ್ಷಕ ಎಂ.ಎ. ಹಿರೇವಡೆಯರವರ ಅಭಿನಂದನಾ ಗ್ರಂಥ 'ಒಲವಿನ ಒಡೆಯ' ಬಿಡುಗಡೆ ಸಮಾರಂಭ ಜರುಗಲಿದ್ದು, ಶಿರಹಟ್ಟಿ, ಬಾಲೇಹೊಸೂರ ಭಾವೈಕ್ಯತಾ ಸಂಸ್ಥಾನಮಠದ ಜಗದ್ಗುರು ಫಕೀರ ದಿಂಗಾಲೇಶ್ವರ ಸ್ವಾಮೀಜಿ, ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ, ಗ್ರಂಥ ಪರಿಚಯವನ್ನು ಶಿವಾನಂದಯ್ಯ ಚರಂತಿಮಠ, ಪ್ರಧಾನ ಸಂಪಾದಕ ಸಿ.ಆರ್. ಯರವಿನತೇಲಿಮಠ ಸೇರಿದಂತೆ ಇತರರು ಆಗಮಿಸಲಿದ್ದಾರೆ.

ಡಿ. 23ರ ಸಂಜೆ 6.30ಕ್ಕೆ ಲಿಂ. ಹಿರಿಯ ಅನ್ನದಾನ ಮಹಾಶಿವಯೋಗಿಗಳವರ 113ನೇ ಹಾಗೂ ಲಿಂ. ಡಾ. ಅಭಿನವ ಅನ್ನದಾನ ಸ್ವಾಮೀಜಿಗಳ ಚತುರ್ಥ ಪುಣ್ಯಸ್ಮರಣೋತ್ಸವದ ಸಾನ್ನಿಧ್ಯವನ್ನು ವಳಬಳ್ಳಾರಿಯ ಸುವರ್ಣಗಿರಿ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ವಹಿಸಲಿದ್ದು, ನಂದವಾಡಗಿ ಮಹಾಂತೇಶ್ವರಮಠ ಮಹಾಂತಲಿಂಗ ಶಿವಾಚಾರ್ಯರು, ದರೂರು ಸಂಗನಬಸವೇಶ್ವರಮಠದ ಕೊಟ್ಟೂರು ಸ್ವಾಮೀಜಿ, ಬಸವಲಿಂಗ ಸ್ವಾಮೀಜಿ, ಗರಗನಾಗಲಾಪೂರದ ಒಪ್ಪತ್ತೇಶ್ವರಸ್ವಾಮಿ ಮಠದ ನಿರಂಜನ ಪ್ರಭು ಸ್ವಾಮೀಜಿ, ಮರಿಕೊಟ್ಟೂರು ದೇಶಿಕರು ಸಮ್ಮುಖ ವಹಿಸುವರು. ಆರ್.ಬಿ. ಪಾಟೀಲ, ಹಾಲಕೆರೆ ಗ್ರಾ.ಪಂ ಅಧ್ಯಕ್ಷ ಗಿರಿಯಪ್ಪಗೌಡ ಮುಲ್ಕಿಪಾಟೀಲ, ಉಪಾಧ್ಯಕ್ಷ ಬಾಳಪ್ಪ ತಲೇಖಾನ ಸುಭಾಸ ಛಾಯಗೋಳ ಇತರರು ಆಗಮಿಸಲಿದ್ದಾರೆ. ದ್ಯಾಮಣ್ಣ ಮಾಸ್ತರ ಬಡಿಗೇರ, ಕಳಕಮಲ್ಲಯ್ಯ ಅಣ್ಣಿಗೇರಿಮಠ, ಮುತ್ತಣ್ಣ ಬಡಿಗೇರ, ಶೇಖಪ್ಪ ಕೋಗಿಲೆ ಸಂಗೀತ ಸೇವೆ ನೀಡಲಿದ್ದಾರೆ.

ಸಂಜೆ 6.30ಕ್ಕೆ ಕೃಷಿ ವಿಚಾರ ಗೋಷ್ಠಿ ಜರುಗಲಿದ್ದು, ಖೇಳಗಿ ಶಿವಲಿಂಗೇಶ್ವರ ಸಂಸ್ಥಾನಮಠದ ಶಿವಲಿಂಗ ಸ್ವಾಮೀಜಿ, ಗುರುಸಿದ್ದ ಶಿವಾಚಾರ್ಯರು, ಅಭಿನವ ಪಂಚಾಕ್ಷರ ಶಿವಾಚಾರ್ಯರು, ಕಾಡಸಿದ್ದೇಶ್ವರ ಶಿವಾಚಾರ್ಯರು, ಶಿವಲಿಂಗದೇಶಿಕರು, ಶರಣಬಸ ದೇವರು, ಶಿಶರಣಬಸವ ಶರಣರು ಸಮ್ಮುಖ ವಹಿಸುವರು. ಶಾಸಕ ಜಿ.ಎಸ್. ಪಾಟೀಲ, ಸಂಸದ ಗೋವಿಂದ ಕಾರಜೋಳ ಭಾಗವಹಿಸಲಿದ್ದಾರೆ. ಹಿರಿಯ ಬೇಸಾಯ ವಿಜ್ಞಾನಿ ಬಸವರಾಜ ಏಣಗಿ ಇವರಿಂದ ಉಪನ್ಯಾಸ ಜರುಗಲಿದೆ. ಮಾಜಿ ಸಚಿವ ಕಳಕಪ್ಪ ಬಂಡಿ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಸಿದ್ದಣ್ಣ ಬಂಡಿ ಆಗಮಿಸಲಿದ್ದಾರೆ. ನಿವೃತ್ತ ಆಡಳಿತಾಧಿಕಾರಿ ಎಸ್.ಜಿ. ಹಿರೇಮಠ, ಡಾ. ಜಿ.ಕೆ. ಕಾಳೆ, ಎ.ಸಿ. ಪಾಟೀಲ, ಜಿಲ್ಲಾ ಕಾನಿಪ ಉಪಾಧ್ಯಕ್ಷ ಪ್ರಭುಸ್ವಾಮಿ ಅರವಟಗಿಮಠ, ಜಿಲ್ಲಾ ಕಾನಿಪ ಸದಸ್ಯ ನಿಂಗರಾಜ ಬೇವಿನಕಟ್ಟಿ, ಆದರ್ಶ ಕುಲಕರ್ಣಿ ಅವರಿಗೆ ಸನ್ಮಾನ ಜರುಗಲಿದೆ.

ಗಂಗಾವತಿ ಬಿ. ಪ್ರಾಣೇಶ, ಬಸವರಾಜ ಮಹಾಮನಿ, ನರಸಿಂಹ ಜೋಶಿ ತಂಡದಿಂದ ಹಾಸ್ಯ ಸಂಜೆ ಜರುಗಲಿದೆ ಎಂದು ಶ್ರೀಮಠದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

> ಡಿ.24ರ ಬೆಳಿಗ್ಗೆ 5-7ರವರೆಗೆ ಶ್ರೀ ಗದ್ದುಗೆಗಳಿಗೆ ಮಹಾರುದ್ರಾಭಿಷೇಕ, ಬಿಲ್ವಾರ್ಚನೆ, ಮಹಾಮಂಗಳಾರುತಿ ಜರುಗಲಿವೆ. ಬೆಳಿಗ್ಗೆ 10 ಗಂಟೆಗೆ ಸೋಮಸಮುದ್ರದ ಸಿದ್ದಲಿಂಗ ಸ್ವಾಮೀಜಿಯವರಿಂದ ಜಂಗಮೋತ್ಸವ ಜರುಗಲಿದೆ. 10.30ಕ್ಕೆ ಧಾರವಾಡದ ಎಸ್‌ಡಿಎಂ ನಾರಾಯಣ ಹಾರ್ಟ್ ಸೆಂಟರ್ ಸಹಯೋಗದಲ್ಲಿ ಉಚಿತ ಹೃದಯ ತಪಾಸಣಾ ಶಿಬಿರ ಜರುಗಲಿದೆ. 12.20ಕ್ಕೆ ಅಕ್ಷರಯೋಗಿ, ಕಾಯಕಯೋಗಿ ಲಿಂ. ಗುರು ಅನ್ನದಾನ ಮಹಾಶಿವಯೋಗಿಗಳ ಜೀವನಾಧಾರಿತ 'ಬೆತ್ತದ ಅಜ್ಜ' ಚಲನಚಿತ್ರದ ಮುಹೂರ್ತ ಜರುಗಲಿದೆ. ಸಂಜೆ 5ಕ್ಕೆ ಶ್ರೀ ಅನ್ನದಾನೇಶ್ವರ ಮಹಾರಥೋತ್ಸವ ಜರುಗಲಿದೆ.

## ಹೈ ಮಾಸ್ಟ್ ದೀಪ ಉದ್ಘಾಟನೆ



■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಎಸ್.ಬಿ. ನಗರ, ಬಸವನಗುಡಿ ಬಡಾವಣೆಯಲ್ಲಿ ಹೈ ಮಾಸ್ಟ್ ಬೀದಿ ದೀಪಗಳನ್ನು ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ ಉದ್ಘಾಟಿಸಿದರು.

ಹೈಮಾಸ್ಟ್ ದೀಪಗಳನ್ನು ಮಂಜೂರು ಮಾಡಿ ಬಡಾವಣೆಗೆ ಬೆಳಕು ನೀಡಿದಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರಿಗೆ ಬಡಾವಣೆ ಪರವಾಗಿ ವರಸಿದ್ಧಿ ವೀರಾಂಜನೇಯ ದೇವಸ್ಥಾನ ಕಮಿಟಿ ಅಧ್ಯಕ್ಷರು ಹಾಗೂ ಬಸವಗುಡಿ ಬಡಾವಣೆ ಅಭಿವೃದ್ಧಿ ಸಂಘದ ಕಾರ್ಯದರ್ಶಿ ಹರೀಶ ಪೂಜಾರ ಅಭಿನಂದನೆ ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ ಹಾಗೂ ಸದಸ್ಯರಾದ ಮಲ್ಲಿಕಾರ್ಜುನ ಐಲಿ, ಬಸವರಾಜ ಕಡೆಮನಿ, ಲಕ್ಷ್ಮಣ ಭಜಂತ್ರಿ ಅವರನ್ನು ಸನ್ಮಾನಿಸಸಲಾಯಿತು.

ಬಡಾವಣೆಯ ನಿವಾಸಿಗಳು ಉದ್ಯಾನವನದ ಅಭಿವೃದ್ಧಿಯ ಕುರಿತು ಪ್ರಾಧಿಕಾರದ ಅಧ್ಯಕ್ಷರಿಗೆ ಮನವಿ ಸಲ್ಲಿಸಿದರು. ತಕ್ಷಣ 5 ಲಕ್ಷ ರೂ ಹಣವನ್ನು ಬಿಡುಗಡೆ ಮಾಡುವುದಾಗಿ ಪ್ರಾಧಿಕಾರದ ಅಧ್ಯಕ್ಷರ ಪರವಾಗಿ ಬಸವರಾಜ ಕಡೆಮನಿ, ಎಂ.ಸಿ. ಐಲಿ ಭರವಸೆ ನೀಡಿದರು.

ಎಸ್.ಎನ್. ಗದ್ದಿ ಸ್ವಾಗತಿಸಿದರು. ಶ್ರೀಧರ ಹಾಳಕೇರಿ ವಂದಿಸಿದರು, ವರಸಿದ್ಧಿ ವೀರಾಂಜನೇಯ ದೇವಸ್ಥಾನ ಕಮಿಟಿ ಅಧ್ಯಕ್ಷರು ಹರೀಶ ಪೂಜಾರ, ಕಾರ್ಯದರ್ಶಿ ವಿ.ಎ. ಸೋನಾರ್, ಉಪಾಧ್ಯಕ್ಷ ಎಸ್.ಎನ್. ತಕ್ಕೇದ, ಖಜಾಂಚಿ ಗವಿಸಿದ್ದಪ್ಪ ಛಲವಾದಿ, ಹಿರಿಯರಾದ ಆರ್. ಎಫ್. ಹಾಳಕೇರಿ, ಸಿ.ಎಸ್. ತೋಟಪ್ಪನವರ, ಶ್ರೀಧರ ಹಾಳಕೇರಿ, ಡಾ. ಬಸವರಾಜ ಚನ್ನಪ್ಪಗೌಡರ, ಹನಮಪ್ಪ ಹದ್ಲಿ, ಬಸವರಾಜ ಜಲ್ಲಿ, ಶಿವಪ್ಪ ಮಾಗುಂಡ ಮುಂತಾದವರು ಉಪಸ್ಥಿತರಿದ್ದರು.

## ಇಂಡಿಗೋ ವಿಮಾನ ರದ್ದತಿಗೆ ಸಂಬಂಧಿಸಿದ ಪಿಐಎಲ್ ವಿಚಾರಣೆ ನಿರಾಕರಿಸಿದ ಸುಪ್ರೀಂ ಕೋರ್ಟ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ನೂರಾರು ಇಂಡಿಗೋ ವಿಮಾನಗಳ ರದ್ದತಿಗೆ ನ್ಯಾಯಾಂಗ ಹಸ್ತಕ್ಷೇಪ ಕೋರಿ ಸಲ್ಲಿಸಲಾದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು (ಪಿಐಎಲ್) ಸೋಮವಾರ ವಿಚಾರಣೆಗೆ ತೆಗೆದುಕೊಳ್ಳಲು ಸುಪ್ರೀಂ ಕೋರ್ಟ್ ನಿರಾಕರಿಸಿದ್ದು, ಅರ್ಜಿದಾರರು ತಮ್ಮ ದೂರುಗಳೊಂದಿಗೆ ದೆಹಲಿ ಹೈಕೋರ್ಟ್ ಅನ್ನು ಸಂಪರ್ಕಿಸುವಂತೆ ನಿರ್ದೇಶಿಸಿದೆ.

ಸುದೀರ್ಘ ವಿಮಾನ ರದ್ದತಿಯಿಂದ ಉಂಟಾದ ಬಿಕ್ಕಟ್ಟನ್ನು ಪರಿಹರಿಸಲು ತ್ವರಿತವಾಗಿ ಕಾರ್ಯನಿರ್ವಹಿಸದ ಕಾರಣ ದೆಹಲಿ ಹೈಕೋರ್ಟ್ ಡಿಸೆಂಬರ್ 10 ರಂದು ಕೇಂದ್ರ ಸರ್ಕಾರವನ್ನು ಪ್ರಶ್ನಿಸಿತ್ತು. ಇದರಿಂದಾಗಿ ಲಕ್ಷಾಂತರ ಪ್ರಯಾಣಿಕರು ಸಿಲುಕಿಕೊಂಡರು, ಇತರ ವಿಮಾನಯಾನ ಸಂಸ್ಥೆಗಳು ಅತಿಯಾದ ದರವನ್ನು ವಿಧಿಸಬೇಕಾಯಿತು. ಸಮಸ್ಯೆ ಎದುರಿಸಿದ ಪ್ರಯಾಣಿಕರಿಗೆ ಬೆಂಬಲ ಮತ್ತು ಮರುಪಾವತಿಯನ್ನು ಒದಗಿಸಲು ಕೇಂದ್ರಕ್ಕೆ ನಿರ್ದೇಶನಗಳನ್ನು ನೀಡುವಂತೆ ಪಿಐಎಲ್ ಕೋರಿತು.

ಸೋಮವಾರ, ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್, ನ್ಯಾಯಮೂರ್ತಿಗಳಾದ ಜೋಯ್ಮಲ್ಯ ಬಾಗ್ಚಿ ಮತ್ತು ವಿಪುಲ್ ಎಂ. ಪಾಮಚೋಲಿ ಅವರನ್ನೊಳಗೊಂಡ ಪೀಠವು ಅರ್ಜಿದಾರ ನರೇಂದ್ರ ಮಿಶ್ರಾ ಅವರು ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆ ನಡೆಸಬೇಕು ಎಂಬ ಅರ್ಜಿಯನ್ನು ಗಮನಿಸಿತು. ಆದರೆ, ಹೈಕೋರ್ಟ್ ಈಗಾಗಲೇ ಇದೇ ರೀತಿಯ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಸ್ವೀಕರಿಸಿದೆ ಎಂದು ಪೀಠವು ಗಮನಿಸಿತು. ಮಿಶ್ರಾ ಅವರನ್ನು ದೆಹಲಿ ಹೈಕೋರ್ಟ್ ಅನ್ನು ಸಂಪರ್ಕಿಸಲು ಹೇಳಿದ್ದು, ಅಲ್ಲಿ ದೂರು ಪರಿಹರಿಸದಿದ್ದರೆ ಉನ್ನತ ನ್ಯಾಯಾಲಯಕ್ಕೆ ಮರಳಲು ನಿಮಗೆ ಸ್ವಾತಂತ್ರ್ಯ ಇದೆ ಎಂದು ಸೂಚಿಸಿದೆ. ಇಂಡಿಗೋ ಪರವಾಗಿ ಹಾಜರಾದ ಹಿರಿಯ ವಕೀಲ ಮುಕುಲ್ ರೋಹಟ್ಗಿ, ನಾಗರಿಕ ವಿಮಾನಯಾನ ನಿರ್ದೇಶನಾಲಯ (ಡಿಜಿಸಿಎ) ಡಿಸೆಂಬರ್ 5 ರಂದು ರದ್ದತಿ, ಪ್ರಯಾಣಿಕರು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಶೀಲಿಸಲು ತಜ್ಞರ ಸಮಿತಿಯನ್ನು ರಚಿಸಿದೆ ಎಂದು ಪೀಠಕ್ಕೆ ತಿಳಿಸಿದರು.

## ನಟಿಯ ಅಪಹರಣ, ಅತ್ಯಾಚಾರ ಪ್ರಕರಣ | ಸಂಚುಕೋರನಿಗೆ ಶಿಕ್ಷೆಯಾಗಿಲ್ಲ, ನ್ಯಾಯ ಇನ್ನೂ ಅಪೂರ್ಣ : ನಟಿ ಮಂಜು ವಾರಿಯರ್

■ವಿಜಯಸಾಕ್ಷಿ ಸುದ್ದಿ, ಕೇರಳ

ಮಲಯಾಳಂ ಮೂಲದ ಬಹುಭಾಷಾ ನಟಿಯ ಅಪಹರಣ, ಅತ್ಯಾಚಾರ ಪ್ರಕರಣದಲ್ಲಿ ನಟ ದಿಲೀಪ್ ಅವರನ್ನು ಸೋಮವಾರ (ಡಿ.8) ನ್ಯಾಯಾಲಯ ಖುಲಾಸೆಗೊಳಿಸಿದೆ.

ನ್ಯಾಯಾಲಯದ ತೀರ್ಪಿನ ಬೆನ್ನಲ್ಲೇ ಮಾಧ್ಯಮಗಳ ಜೊತೆ ಮಾತನಾಡಿದ್ದ ದಿಲೀಪ್, ಮಾಜಿ ಪತ್ನಿ ಮಂಜು ವಾರಿಯರ್ ತನ್ನ ವಿರುದ್ಧ ಪಿತೂರಿ ನಡೆಸಿದ್ದಾರೆ ಎಂದು ಆರೋಪಿಸಿದ್ದರು. ಈ ಕುರಿತು ಮಂಜು ವಾರಿಯರ್ ಭಾನುವಾರ (ಡಿ.14) ಪ್ರತಿಕ್ರಿಯಿಸಿದ್ದು, "ಪ್ರಕರಣದ ಸಂಚುಕೋರನಿಗೆ ಇನ್ನೂ ಶಿಕ್ಷೆಯಾಗಿಲ್ಲ, ಹಾಗಾಗಿ ನ್ಯಾಯ ಇನ್ನೂ ಅಪೂರ್ಣವಾಗಿದೆ" ಎಂದು ಹೇಳಿದ್ದಾರೆ.

ಸಾಮಾಜಿಕ ಜಾಲತಾಣ ಇನ್‌ಸ್ಟಾಗ್ರಾಮ್‌ನಲ್ಲಿ ಪೋಸ್ಟ್ ಹಾಕಿರುವ ಮಂಜು ವಾರಿಯರ್, "ಗೌರವಾನ್ವಿತ ನ್ಯಾಯಾಲಯದ ಬಗ್ಗೆ ನನಗೆ ಅಪಾರ ಗೌರವವಿದೆ. ಆದರೆ, ಈ ಪ್ರಕರಣದಲ್ಲಿ ಸಂತ್ರಸ್ತೆಗೆ ನ್ಯಾಯ ಇನ್ನೂ ಅಪೂರ್ಣವಾಗಿದೆ. ದೈಹಿಕವಾಗಿ ಅಪರಾಧ ಎಸಗಿದವರಿಗೆ ಮಾತ್ರ ಶಿಕ್ಷೆಯಾಗಿದೆ. ಆದರೆ, ಈ ಹೇಯ ಕೃತ್ಯಕ್ಕೆ ಸಂಚು ರೂಪಿಸಿದವರು, ಅದು ಯಾರೇ ಆಗಿರಲಿ, ಇನ್ನೂ ಮುಕ್ತವಾಗಿ ಓಡಾಡುತ್ತಿದ್ದಾರೆ. ಇದು ಅತ್ಯಂತ ಭಯಾನಕ ವಿಚಾರ. ಈ ಅಪರಾಧದ ಹಿಂದಿರುವ ಪ್ರತಿಯೊಬ್ಬರನ್ನು ಹೊಣೆಗಾರರನ್ನಾಗಿ ಮಾಡಿದಾಗ ಸರಿಯಾದ ನ್ಯಾಯ ಸಿಗುತ್ತದೆ"ಎಂದು ಬರೆದುಕೊಂಡಿದ್ದಾರೆ.

## ಶೋಭಾಗೆ ಪಿಎಚ್‌ಡಿ ಪ್ರದಾನ

■ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿನ ಅಣ್ಣಿಗೇರಿ ಗ್ರಾಮದ ಎಂ.ಬಿ. ಹಳ್ಳಿ ಸರ್ಕಾರಿ ಪ್ರಥಮದರ್ಜೆ ಮಹಾವಿದ್ಯಾಲಯದ ವಾಣಿಜ್ಯಶಾಸ್ತ್ರ ವಿಭಾಗದ ಸಹಪ್ರಾಧ್ಯಾಪಕಿ ಶೋಭಾ ಎನ್ ಅವರಿಗೆ ಪಿಎಚ್‌ಡಿ ಪ್ರದಾನ ಮಾಡಲಾಗಿದೆ.

ಆಂಧ್ರಪ್ರದೇಶದ ಡ್ರಾವಿಡಿಯನ್ ವಿಶ್ವವಿದ್ಯಾನಿಲಯ ಕುಪ್ಪಂನಲ್ಲಿ 'ವಿದ್ಯುತ್ ಮಗ್ಗ ಉದ್ಯಮದ ಸಮಸ್ಯೆಗಳು ಮತ್ತು ನಿರೀಕ್ಷೆಗಳು- ಗದಗ ಜಿಲ್ಲೆಯ ಒಂದು ಪ್ರಕರಣ ಅಧ್ಯಯನ' ಎನ್ನುವ ವಿಷಯದಲ್ಲಿ ಗದಗ ನಗರದ ಆದರ್ಶ ಶಿಕ್ಷಣ ಸಮಿತಿಯ ನಿವೃತ್ತ ಪ್ರಾಧ್ಯಾಪಕ ಡಾ. ಎಂ.ಎಲ್. ಗುಳೇದಗುಡ್ಡ ಇವರ ಮಾರ್ಗದರ್ಶನದಲ್ಲಿ ಮಹಾಪ್ರಬಂಧವನ್ನು ಮಂಡಿಸಿದ್ದರು.

## ಇಕೋ-ಥಿಂಕರ್ಸ್ ಫೆಸ್ಟ್‌ನಲ್ಲಿ ಪ್ರಥಮ

■ವಿಜಯಸಾಕ್ಷಿ ಸುದ್ದಿ, ಗದಗ

ಶಹರದ ಕೆ.ಎಲ್.ಇ ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದ ಪ್ರಥಮ ವರ್ಷದ ವಿದ್ಯಾರ್ಥಿನಿ ಸ್ನೇಹಾ ಕಾಟ್ವಾ ಮಾರ್ಗೋವಾ-ಗೋವಾದ ಜಿ.ಆರ್. ಕಾರೆ ಕಾನೂನು ಕಾಲೇಜಿನಲ್ಲಿ ಆಯೋಜಿಸಿದ್ದ ಪ್ರತಿಷ್ಠಿತ ರಾಷ್ಟ್ರೀಯ ಅಂತರ-ಕಾಲೇಜು ಕಾನೂನು ಉತ್ಸವವಾದ ಜ್ಯೂರಿಸ್ ಓಪನ್-2025 ಇಕೋ-ಥಿಂಕರ್ಸ್ ಫೆಸ್ಟ್‌ನ ಮೂರನೇ ಆವೃತ್ತಿಯ ಎಕ್ಸ್‌ಟೆಂಪೋರ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ.

ಇದಲ್ಲದೆ, ಜಾಮೀನು ಅರ್ಜಿಗೆ ಆಕ್ಷೇಪಣೆಗಳಲ್ಲಿ ದ್ವಿತೀಯ ವರ್ಷದ ವಿದ್ಯಾರ್ಥಿನಿ ಧ್ರುವಿ ಸಂಕಲೇಶ ಅತ್ಯುತ್ತಮ ಪ್ರದರ್ಶನಕ್ಕಾಗಿ ಪ್ರಶಸ್ತಿ ಪಡೆದಿದ್ದಾರೆ.

ವಿದ್ಯಾರ್ಥಿನಿಯರಾದ ಧ್ರುವಿ ಸಂಕಲೇಶ ಮತ್ತು ಸ್ನೇಹಾ ಕಾಟ್ವಾ ಮಂಡಿಸಿದ 4 ನೀತಿ ಕರಡುಗಳಲ್ಲಿ ಅತ್ಯುತ್ತಮವಾದದ್ದು ಮತ್ತು ಇದನ್ನು ಗೋವಾ ರಾಜ್ಯ ಸರ್ಕಾರಕ್ಕೆ ಶಿಫಾರಸು ಮಾಡಲಾಗುವುದು ಎಂದು ಆಯೋಜಕರು ತಿಳಿಸಿದ್ದಾರೆ. ಕಾಲೇಜಿನ ಆಡಳಿತ ಮಂಡಳಿ, ಉಪನ್ಯಾಸಕರು, ಸಿಬ್ಬಂದಿ ವರ್ಗ ವಿದ್ಯಾರ್ಥಿನಿಯರ ಸಾಧನೆಯನ್ನು ಶ್ಲಾಘಿಸಿದ್ದಾರೆ ಎಂದು ಕಾಲೇಜಿನ ಪ್ರಾಚಾರ್ಯ ಡಾ. ಎಸ್.ಎಂ. ಹುಲ್ಲೂರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಂತಾರಾಷ್ಟ್ರೀಯ ವಿಜ್ಞಾನ ವಿಸ್ತೃತ ಕಾರ್ಯಕ್ರಮದ ದಶಮಾನೋತ್ಸವ

# ವಿದ್ಯಾರ್ಥಿಗಳ ಕುತೂಹಲ ತಣಿಸಿದ ವಿಜ್ಞಾನಿಗಳು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸ್ಕೂಲ್ ಚಂದನದಲ್ಲಿ 3 ದಿನಗಳ ಕಾಲ ಭಾರತರತ್ನ ಪ್ರೊ. ಸಿ.ಎನ್.ಆರ್. ರಾವ್ ಎಜ್ಯುಕೇಶನ ಫೌಂಡೇಶನ್, ಜವಾಹರಲಾಲ್ ನೆಹರು ಉನ್ನತ ಸಂಶೋಧನಾ ಕೇಂದ್ರ ಹಾಗೂ ಸ್ಕೂಲ್ ಚಂದನ ಶಾಲೆಯ ಸಹಯೋಗದಲ್ಲಿ ಅಂತಾರಾಷ್ಟ್ರೀಯ ವಿಜ್ಞಾನ ವಿಸ್ತೃತ ಕಾರ್ಯಕ್ರಮದ ದಶಮಾನೋತ್ಸವ ಕಾರ್ಯಕ್ರಮದ 2ನೇ ದಿನವಾದ ರವಿವಾರ ವಿದ್ಯಾರ್ಥಿಗಳ ಸಂದೇಹ ನಿವಾರಣೆಗೆ ವಿಜ್ಞಾನಿಗಳ ಪಾಠ, ಪ್ರಯೋಗಗಳ ಮುಖಾಂತರ ತಿಳುವಳಿಕೆ ನೀಡುವ ಕಾರ್ಯಕ್ರಮವು ಯಶಸ್ವಿಯಾಗಿ ಜರುಗಿತು.



ಹಿರಿಯ ವಿಜ್ಞಾನಿಗಳು ಉತ್ಸಾಹದಿಂದ ವಿಜ್ಞಾನದ ವಿಷಯಗಳು ಸುಲಲಿತ ಎನ್ನುವ ರೀತಿಯಲ್ಲಿ ಹೇಳಿಕೊಟ್ಟರು. ಕರ್ನಾಟಕ ಸರಕಾರ ಉನ್ನತ ಶಿಕ್ಷಣ ಅಕಾಡೆಮಿ ಮಾಜಿ ನಿರ್ದೇಶಕ, ಹಿರಿಯ ವಿಜ್ಞಾನಿ ಡಾ. ಎಸ್. ಎಂ. ಶಿವಪ್ರಸಾದ ವಿಜ್ಞಾನದ ಮಹತ್ವವನ್ನು ವಿವರಿಸಿದರು. ಮಕ್ಕಳೊಂದಿಗೆ ಬೆರತು ಪಾಠ ಮಾಡಿದ ಅವರು, ವಿಜ್ಞಾನದ ಎಲ್ಲ ವಿಷಯಗಳಲ್ಲಿ ಆಸಕ್ತಿಯಿಂದ ಕಲಿತರೆ ಯಾವುದೂ ಅಸಾಧ್ಯವಲ್ಲ ಎಂದು ನಿತ್ಯ ಜೀವನದ ವಿಜ್ಞಾನ, ಅನ್ವೇಷಣೆಗಳು, ನಿರಂತರ ಕಲಿಕೆ, ಜ್ಞಾನದ ಮಹತ್ವ ಇತ್ಯಾದಿಗಳನ್ನು ವಿದ್ಯಾರ್ಥಿಗಳಿಗೆ ಕಥೆಗಳ ಮೂಲಕ ಹೇಳಿದರು. ಸಂಸ್ಥೆಯ ಸಂಸ್ಥಾಪಕ ಟಿ. ಈಶ್ವರ ಮಾತನಾಡಿ, ಮೂರು ದಿನಗಳ ಕಾಲ ನಡೆಯುವ ವಿಜ್ಞಾನ ವಿಸ್ತೃತ ಕಾರ್ಯಕ್ರಮ ಚಂದನ ಶಾಲೆಯಲ್ಲದೆ ಎಲ್ಲ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳಿಗೆ ಹೆಚ್ಚು ಉಪಯುಕ್ತವಾಗಿದ್ದು, 10 ವರ್ಷಗಳಿಂದ ಈ ಕಾರ್ಯಕ್ರಮ ಯಶಸ್ವಿಯಾಗಿ ಜರುಗುತ್ತಿರುವದಕ್ಕೆ ಭಾರತರತ್ನ ಡಾ. ಸಿ.ಎನ್.ಆರ್. ರಾವ್ ಹಾಗೂ ಡಾ. ಇಂದುಮತಿ ರಾವ್ ಅವರ ಆಶೀರ್ವಾದ ಹಾಗೂ ಜವಾಹರಲಾಲ್ ನೆಹರು ಉನ್ನತ ಸಂಶೋಧನೆ ಕೇಂದ್ರದ ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದ ವಿಜ್ಞಾನಿಗಳು ನೀಡುವ ವಿಶೇಷ ಜ್ಞಾನ ವಿಜ್ಞಾನದ ಬಗ್ಗೆ ಮಕ್ಕಳಲ್ಲಿ ಒಲವು ಮೂಡಿಸುವ ನಿಟ್ಟಿನಲ್ಲಿ ಯಶಸ್ವಿಯಾಗಿದೆ ಎಂದು ಹೇಳಿದರು.

ನಿರ್ದೇಶಕಿ ಗಿರಿಜಾ ಈಶ್ವರ, ಚಂದನ್ ಈಶ್ವರ, ಪ್ರಾಚಾರ್ಯ ಆರ್.ಜಿ. ಬಾವಾನವರ ಹಾಗೂ ಶಿಕ್ಷಕರು ಹಾಜರಿದ್ದರು.

> ವಿಜ್ಞಾನಿ ಡಾ. ವಿನಾಯಕ ಪತ್ತಾರ ಮಕ್ಕಳಿಗೆ ಪ್ರಯೋಗಗಳ ಮೂಲಕ ವಿಜ್ಞಾನ ಎಂದರೇನು ಎನ್ನುವದನ್ನು ಪ್ರಾಯೋಗಿಕವಾಗಿ ವಿವರಿಸಿದರು. ಸೂರ್ಯ ಮತ್ತು ಗ್ರಹಗಳ ಬಗ್ಗೆ, ಚಂದ್ರಯಾನ, ಭೂಮಿಯ ಗುರುತ್ವಾಕರ್ಷಣೆ ಬಲ ಮತ್ತು ಬ್ರಹ್ಮಾಂಡ, ಅಂತರಿಕ್ಷ ಪ್ರಯಾಣ, ನಕ್ಷತ್ರ ಪುಂಜಗಳು, ಗ್ಯಾಲಕ್ಸಿ ಬಗ್ಗೆ ವಿಸ್ತಾರವಾಗಿ ಮಕ್ಕಳಿಗೆ ವಿವರಿಸಿದರು. ಪ್ರೊ. ವಿದ್ಯಾಧಿರಾಜ್ ಬೆಳಕು, ಬೆಳಕಿನ ವೇಗ, ಗಾಳಿ, ಗಾಳಿಯ ವೇಗ, ಶಬ್ದದ ವೇಗದ ಬಗ್ಗೆ ಪ್ರಾಯೋಗಿಕವಾಗಿ ತಿಳಿಸಿದರು. ಮತ್ತೋರ್ವ ವಿಜ್ಞಾನಿ ಡಾ. ಪ್ರತಾಪ ವೈಷ್ಣೋಯಿ, ಭೌತಶಾಸ್ತ್ರದ ತರಗತಿಗಳನ್ನು ಪ್ರಾಯೋಗಿಕವಾಗಿ ಎಲ್ಲ ವಿದ್ಯಾರ್ಥಿಗಳಿಗೆ ಮನಮುಟ್ಟುವಂತೆ ವಿವರಿಸಿದರು.

# ನೇಣಿಗೆ ಕೊರಳೊಡ್ಡಿದ ಅನ್ನದಾತ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸೋಮಪ್ಪ ಬಸವಣ್ಣೆಪ್ಪ ಸವಣೂರ (70) ಎಂಬ ರೈತ ಸಾಲಬಾಧೆಗೆ ಮನನೊಂದು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಸೋಮವಾರ ಜರುಗಿದೆ.



ಕೃಷಿ ಚಟುವಟಿಕೆಗಳಿಗಾಗಿ ಪಟ್ಟಣದ ವ್ಯವಸಾಯ ಸೇವಾ ಸಹಕಾರಿ ಸೊಸೈಟಿ, ಖಾಸಗಿ ಬ್ಯಾಂಕ್ ಮತ್ತು ಕೈಗಡ ಸಾಲ ಮಾಡಿಕೊಂಡಿದ್ದಾರೆ.

ಸ್ವಂತ ಜಮೀನಲ್ಲದೇ ಲಾವಣಿ, ಪಾಲು ಜಮೀನಿನಲ್ಲಿ ಬಿತ್ತನೆ ಮಾಡಿ ಮುಂಗಾರಿ-ಹಿಂಗಾರಿ ಹಂಗಾಮಿನ ಬೆಳೆಗಳಿಂದ ನಷ್ಟಕ್ಕೊಳಗಾಗಿದ್ದರು. ಬ ಾ ನ ್ ಂ ವ ಾ ರ ್ ವ ್ ಷ್ಟ್ ೀ ದಲ್ಲಾಳಿಗಳಿಗೆ ಗೋವಿನಜೋಳ ಮಾರಾಟ ಮಾಡಿದ್ದರು. ಗೋವಿನಜೋಳದ ಇಳುವರಿ ಕುಂಠಿತ, ಬೆಲೆ ಕುಸಿತದಿಂದ ಸಾಲ ತೀರಿಸುವುದು ಹೇಗೆಂಬ ಚಿಂತೆಯಲ್ಲಿದ್ದರೆನ್ನಲಾಗಿದೆ.

ಸೋಮವಾರ ನಸುಕಿನ ವೇಳೆ ಅಕ್ಕಿಗುಂದ ರಸ್ತೆಯಲ್ಲಿನ ಜಮೀನಿಗೆ ಹೋಗಿ ಬೇವಿನಮರಕ್ಕೆ ನೇಣು ಹಾಕಿಕೊಂಡಿದ್ದಾರೆ.

ಏನೂ ಅರಿಯದ ಮಗ ಎಂದಿನಂತೆ ಹೊಲಕ್ಕೆ ಹೋದಾಗ ದೃಶ್ಯ ಕಂಡು ಎದೆ ಬಡಿದು-ಕೊಂಡು ಅತ್ತರೂ ಅಳು ಮಾತ್ರ ಅರಣ್ಯರೋದನವಾಗಿತ್ತು. ಸ್ಥಳಕ್ಕೆ ಕಂದಾಯ, ಪೊಲೀಸ್ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದ್ದು, ಮಾಹಿತಿ ಸಂಗ್ರಹಿಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

## 'ನಮ್ಮ ಕಪ್ಪತಗುಡ್ಡ ಕಪ್' ವಾಲಿಬಾಲ್ ಪಂದ್ಯಾವಳಿ ಡಿ. 21, 25, 30ಕ್ಕೆ

# ಕ್ರೀಡೆ ಮೂಲಕ ಅರಣ್ಯ ಇಲಾಖೆಯಿಂದ ಜಾಗೃತಿ

■ವಿಜಯಸಾಕ್ಷಿ ಸುದ್ದಿ, ಡಂಬಳ




> ಬೇಸಿಗೆ ಸಮಯದಲ್ಲಿ ಬೀಳುವ ಬೆಂಕಿ ಪ್ರಕರಣಗಳು ಅರಣ್ಯ ಇಲಾಖೆಯ ನಿದ್ದೆಗೆಡಿಸುತ್ತವೆ. ಕಪ್ಪತಗುಡ್ಡಕ್ಕೆ ಕಿಡಿಗೇಡಿಗಳು ಬೆಂಕಿ ಹಚ್ಚುವುದರಿಂದ ಆಮ್ಲಜನಕದಲ್ಲಿ ಏರಾಪೇರಾಗಿ ಮನುಷ್ಯ ಸಂಕುಲಕ್ಕೆ ದೊಡ್ಡ ಸಮಸ್ಯೆಯೊಡ್ಡುತ್ತದೆ. ಅಭೂತಪೂರ್ವ ಸಸ್ಯ ಸಂಪತ್ತು ಮತ್ತು ವನ್ಯಪ್ರಾಣಿಗಳ ಹಿತ ಕಾಪಾಡುವುದಕ್ಕಾಗಿ ಅರಣ್ಯ ಇಲಾಖೆ ಕಪ್ಪತಗುಡ್ಡ ಕಪ್ ವಾಲಿಬಾಲ್ ಪಂದ್ಯಾವಳಿ ಆಯೋಜಿಸಿ ಗ್ರಾಮದ ಯುವಕರಲ್ಲಿ ಪರಿಸರದ ಮಹತ್ವದ ಅರಿವು ಮೂಡಿಸಲು ಮುಂದಾಗಿದೆ. ಇದರ ಸಂಪೂರ್ಣ ಸದುಪಯೋಗಕ್ಕೆ ಮುಂದಾಗಬೇಕು.
>
> **– ಮಂಜುನಾಥ ರಾಮಣ್ಣ ಮೇಗಲಮನಿ.**
> ಆರ್‌ಎಫ್‌ಒ.

ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಡಂಬಳ ಹೋಬಳಿಯ ವ್ಯಾಪ್ತಿಯಲ್ಲಿ ಬರುವ ಸಸ್ಯಕಾಶಿ ಕಪ್ಪತ್ತಗುಡ್ಡ ಕೆಲ ಕಿಡಿಗೇಡಿಗಳಿಂದಾಗಿ ಹರಡುವ ಬೆಂಕಿಯ ಕೆನ್ನಾಲಿಗೆಗೆ ಪಕ್ಷಿಗಳು, ಸರೀಸೃಪಗಳ ಸಾವು, ಅಪಾರ ಸಂಪತ್ತು ಹಾಳಾಗಬಾರದು ಎನ್ನುವ ಹಿನ್ನೆಲೆಯಲ್ಲಿ ಕಪ್ಪತಗುಡ್ಡದಂಚಿನ ಗ್ರಾಮಗಳ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಅರಣ್ಯ ಇಲಾಖೆ 'ನಮ್ಮ ಕಪ್ಪತಗುಡ್ಡ ಕಪ್' ವಾಲಿಬಾಲ್ ಪಂದ್ಯಾವಳಿಯನ್ನು ಡಿ. 21, 25, 30ರಂದು ಆಯೋಜಿಸಿದೆ.

ಮುಂಡರಗಿ ಹಾಗೂ ಡಂಬಳ ಹೋಬಳಿ ವ್ಯಾಪ್ತಿಯ ಕಪ್ಪತಗುಡ್ಡದಂಚಿನಲ್ಲಿ ಬರುವ 31 ಗ್ರಾಮಗಳ ಯುವಕರಿಗೆ ಹಾಗೂ ಗ್ರಾಮಸ್ಥರಿಗೆ ಕಪ್ಪತಗುಡ್ಡ ವನ್ಯಜೀವಿಧಾಮವನ್ನು ಬೆಂಕಿಯಿಂದ ರಕ್ಷಣೆ ಮಾಡುವ ಕುರಿತು ಜನಜಾಗೃತಿಗಾಗಿ ಮುಂಡರಗಿ ತಾಲೂಕು ಮಟ್ಟದ ಯುವಕರಿಗಾಗಿ ವಾಲಿಬಾಲ್ ಪಂದ್ಯಾವಳಿ ನಡೆಸಲು ಯೋಜಿಸಿದೆ.

ವಾಲಿಬಾಲ್ ಪಂದ್ಯಾವಳಿಯನ್ನು ಆಯೋಜಿಸಿದಾಗ ಕಪ್ಪತಗುಡ್ಡದ ಅಂಚಿನ ಗ್ರಾಮಗಳ ಯುವಕರು, ಹಿರಿಯರು, ಮುಖಂಡರು ಒಂದೆಡೆ ಸೇರುವುದರಿಂದ ಒಂದೇ ವೇದಿಕೆಯಲ್ಲಿ ಕಪ್ಪತಗುಡ್ಡ ವನ್ಯಜೀವಿಧಾಮದ ಉದ್ದೇಶ, ಮಹತ್ವ ಹಾಗೂ ಬೆಂಕಿ ಹಚ್ಚುವುದರಿಂದ ಉಂಟಾಗುವ ಹಾನಿ ಕುರಿತು ಜನಜಾಗೃತಿ ಮೂಡಿಸಬಹುದು. ಜೊತೆಗೆ ತಿಳುವಳಿಕೆ ನೀಡಲು ಗದಗ ಪ್ರಾದೇಶಿಕ ಅರಣ್ಯ ವಿಭಾಗ ಮತ್ತು ಮುಂಡರಗಿಯ ಕಪ್ಪತ್ತಗುಡ್ಡ ಅರಣ್ಯ ವಲಯದ ಸಂಯುಕ್ತ ಆಶ್ರಯದಲ್ಲಿ ಯೋಜನೆ ಹಾಕಿಕೊಂಡಿದೆ.

ಪ್ರಸಕ್ತ ವರ್ಷ ಗದಗ ಪ್ರಾದೇಶಿಕ ಅರಣ್ಯ ವಿಭಾಗವು ಮುಂಡರಗಿ ತಾಲೂಕಿನ ಡೋಣಿ ಗ್ರಾಮದ ಕರ್ನಾಟಕ ಪಬ್ಲಿಕ್ ಸ್ಕೂಲ್ ಆವರಣದಲ್ಲಿ ಡಿ. 21ರಂದು ಡಂಬಳ ಹೋಬಳಿ ಮಟ್ಟದ ಪಂದ್ಯಗಳು ಹಾಗೂ ಬಾಗೇವಾಡಿಯ ಟಿ.ಎಸ್. ಪ್ರೌಢಶಾಲೆಯ ಆವರಣದಲ್ಲಿ ಡಿ. 25ರಂದು ಮುಂಡರಗಿ ಹೋಬಳಿ ಮಟ್ಟದ ಪಂದ್ಯಗಳನ್ನು ಆಯೋಜಿಸಿದೆ. ಡಿ. 30ರಂದು ಮುಂಡರಗಿ ಪಟ್ಟಣದ ಕೆ.ಆರ್. ಬೆಲ್ಲದ ಮಹಾವಿದ್ಯಾಲಯದ ಆವರಣದಲ್ಲಿ ತಾಲೂಕು ಮಟ್ಟದ ಫೈನಲ್ ಪಂದ್ಯಗಳನ್ನು ಆಯೋಜಿಸಿದೆ. ಪಂದ್ಯಾವಳಿಯಲ್ಲಿ ಭಾಗವಹಿಸುವ ಆಟಗಾರರಿಗೆ ಅರಣ್ಯ ಇಲಾಖೆ ವತಿಯಿಂದಲೇ ಟೀಶರ್ಟ್ ವಿತರಣೆಗೆ ಕ್ರಮ ಕೈಗೊಂಡಿದ್ದು, ಪ್ರಥಮ ಬಹುಮಾನವಾಗಿ 15 ಸಾವಿರ ರೂ, ದ್ವಿತೀಯ 10 ಸಾವಿರ ರೂ ಹಾಗೂ ತೃತೀಯ ಬಹುಮಾನವಾಗಿ 5 ಸಾವಿರ ರೂ ಮತ್ತು ಟ್ರೋಫಿಯನ್ನು ನೀಡಲಾಗುತ್ತದೆ.

# ಸೋಮೇಶ್ವರ ದೇವಸ್ಥಾನದ ಅರ್ಚಕರ ಸಭೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಐತಿಹಾಸಿಕ ಪ್ರಸಿದ್ಧ ಶ್ರೀ ಸೋಮೇಶ್ವರ ದೇವಸ್ಥಾನದ ಸಮಸ್ತ ಅರ್ಚಕರು ರವಿವಾರ ಹಿರಿಯರಾದ ಮಧುಕರ ಪೂಜಾರ, ಶ್ರೀನಿವಾಸ ಪೂಜಾರ, ಪ್ರಕಾಶ ಪೂಜಾರ ಅವರ ಸಮ್ಮುಖದಲ್ಲಿ ಸಭೆ ಸೇರಿ, ವಿವಿಧ ವಿಷಯಗಳ ಕುರಿತು ಚರ್ಚೆ ನಡೆಸಿದರು.

ಅರ್ಚಕರ ಸಮಿತಿ ಅಧ್ಯಕ್ಷರಾಗಿ ಎರಡು ದಶಕಗಳ ಕಾಲ ಯಶಸ್ವಿಯಾಗಿ ಸಂಘವನ್ನು ಮುನ್ನಡೆಸಿಕೊಂಡು ಹೋಗಿದ್ದ ದಿ. ವಿ.ಎಲ್. ಪೂಜಾರ ಅವರಿಗೆ ಶ್ರದ್ಧಾಂಜಲಿ ಅರ್ಪಿಸಲಾಯಿತು. ಅವರ ಸೇವಾಕಾರ್ಯ ಮತ್ತು ಸಂಘಕ್ಕೆ ಅವರು ನೀಡಿದ ಕೊಡುಗೆಗಳನ್ನು ಸ್ಮರಿಸಲಾಯಿತು.

ಇದೇ ಸಂದರ್ಭದಲ್ಲಿ ಅರ್ಚಕರ ಸಮಿತಿಗೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ನೂತನ ಅಧ್ಯಕ್ಷರಾಗಿ ದಿಗಂಬರ ಮುರಲೀಧರ ಪೂಜಾರ ಅವರನ್ನು ಸರ್ವಾನುಮತದಿಂದ ಘೋಷಿಸಲಾಯಿತು. ರಾಘವೇಂದ್ರ ಸೋಮನಾಥ ಪೂಜಾರ (ಉಪಾಧ್ಯಕ್ಷರು), ಸಮೀರ ಕೃಷ್ಣಾಜಿ ಪೂಜಾರ (ಕಾರ್ಯದರ್ಶಿ) ಹಾಗೂ ಕೃಷ್ಣ ದತ್ತಾತ್ರೇಯ ಪೂಜಾರ (ಖಜಾಂಚಿ)ಯಾಗಿ ಆಯ್ಕೆಯಾದರು.

ಈ ಸಂದರ್ಭದಲ್ಲಿ ರಮಾಕಾಂತ ಪೂಜಾರ, ಶಾಮಸುಂದರ ಪೂಜಾರ, ದತ್ತಾತ್ರೇಯ ಪೂಜಾರ, ರಾಜೇಶ ಪೂಜಾರ, ಉದಯಕುಮಾರ ಪೂಜಾರ, ನಾಗರಾಜ ಪೂಜಾರ, ಪರಶುರಾಮ ಪೂಜಾರ, ಉಮೇಶ ಕುಲಕರ್ಣಿ, ಮಹೇಶ ಕುಲಕರ್ಣಿ, ರವಿ ಕುಲಕರ್ಣಿ, ಸುಂದರ ಕುಲಕರ್ಣಿ, ಚಿಕ್ಕರಸಯ್ಯ ಪೂಜಾರ, ಸತೀಶ ಕುಲಕರ್ಣಿ, ಪ್ರಕಾಶ ಡಿ.ಪೂಜಾರ, ಬಾಲಕೃಷ್ಣ ಪೂಜಾರ, ರಮೇಶ ಪೂಜಾರ, ಸೋಮನಾಥ ಪೂಜಾರ ಮುಂತಾದವರಿದ್ದರು.

# ಭರತನಾಟ್ಯ ನಾಡಿನ ಸಂಸ್ಕೃತಿಯ ಪ್ರತೀಕ

▸▸ಮೊದಲನೇ ಪುಟದಿಂದ

ಕಲೆ ಉಳಿಸಿ-ಬೆಳೆಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳ ಕಾರ್ಯ ನಿರಂತರವಾಗಿರಲಿ ಎಂದರು.

ಮುಖ್ಯ ಅತಿಥಿಗಳಾಗಿದ್ದ ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಮಾತನಾಡಿ, ಮಕ್ಕಳಿಗೆ ಓದು-ಬರಹದ ಜೊತೆಗೆ ಕಲೆ, ಸಾಹಿತ್ಯ, ಸಂಗೀತ, ಕ್ರೀಡೆ ಇತರೆ ಪಠ್ಯ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವಂತೆ ಮಾಡಬೇಕು. ಅವರಲ್ಲಿನ ಪ್ರತಿಭೆ, ಕೌಶಲ್ಯ ಗುರುತಿಸಿ ಪ್ರೋತ್ಸಾಹಿಸಬೇಕು. ತಂತ್ರಜ್ಞಾನದ ಪ್ರಭಾವದ ನಡುವೆಯೂ ಮಕ್ಕಳಿಗೆ ನಮ್ಮ ದೇಶದ ಸಾಂಸ್ಕೃತಿಕ ಶ್ರೀಮಂತಿಕೆಯ ಕಲೆ, ಸಂಗೀತ, ಸಾಹಿತ್ಯ, ಹಬ್ಬ, ಉತ್ಸವ, ಆಚರಣೆಗಳನ್ನು ಉಳಿಸಿ-ಬೆಳೆಸಿ-ಪ್ರೋತ್ಸಾಹಿಸುವ ಗುರುತರ ಜವಾಬ್ದಾರಿ ಎಲ್ಲರದ್ದಾಗಿದೆ ಎಂದರು. ಭರತನಾಟ್ಯ ಶಾಲೆಯ ಮುಖ್ಯಸ್ಥರಾದ ವಿದುಷಿ ಡಾ. ಹೇಮಾ ವಾಘಮೋಡೆ ಗೌರವ ಸನ್ಮಾನ ಸ್ವೀಕರಿಸಿ ಮಾತನಾಡಿದರು.



ಉದ್ಯಮಿ ಬಸವೇಶ ಮಹಾಂತಶೆಟ್ಟರ, ಸುನೀಲ ಮಹಾಂತಶೆಟ್ಟರ ಮಾತನಾಡಿದರು. ಮಹಾದೇವಪ್ಪ ಚಕ್ರಸಾಲಿ ಅಧ್ಯಕ್ಷತೆ ವಹಿಸಿದ್ದರು. ಶಾಲೆಯ ಕಾರ್ಯದರ್ಶಿ ಸರೋಜಾ ಗೌಡರ ಪ್ರಾಸ್ತಾವಿಕ ನುಡಿದರು. ಗಂಗಾಧರ ಮೆಣಸಿನಕಾಯಿ, ಮಂಜುನಾಥ ಕೊಕ್ಕರಗುಂದಿ, ಪ್ರವೀಣ ಬೋಮಲೆ, ವಿಜಯ ಕುಂಬಾರ, ವಿಶಾಲ ಬಟಗುರ್ಕಿ, ಜಗದೀಶ ಪಾಟೀಲ, ವೈಭವ ಗೋಗಿ, ಜಗದೀಶ ಆಚಾರ, ಪ್ರಭು ಬೋಮಲೆ ಸೇರಿ ಅನೇಕರಿದ್ದರು. ನವೀನ ಹಿರೇಮಠ, ರತ್ನಾ ಕುಂಬಾರ ನಿರೂಪಿಸಿದರು. ಬಳಿಕ ನೃತ್ಯ ಶಾಲೆಯ ಮಕ್ಕಳಿಂದ ನೃತ್ಯ ರೂಪಕ, ನಾಟ್ಯ ಸಂಭ್ರಮ ಮನ ಸೆಳೆಯಿತು.

## ಆಧಾರ್ ಸೇವೆ ಇಲ್ಲದೆ ಹೊಸ ನೋಂದಣಿಗಾಗಿ ಪರದಾಡುತ್ತಿರುವ ಗ್ರಾಮೀಣ ಜನತೆ

# ಆಧಾರ ಕಳೆದುಕೊಂಡ ಆಧಾರ್ ನೋಂದಣಿ

■ವಿಜಯಸಾಕ್ಷಿ ಸುದ್ದಿ, ಡಂಬಳ

ನಾಗರಿಕರಿಗೆ ಗುರುತಿನ ದಾಖಲೆಯಾದ ಆಧಾರ್ ಕಾರ್ಡ್ ನೋಂದಣಿ, ತಿದ್ದುಪಡಿಗಾಗಿ ಸಾರ್ವಜನಿಕರು ಪರದಾಡುತ್ತಿದ್ದಾರೆ. 20 ಸಾವಿರ ಜನಸಂಖ್ಯೆ ಹೊಂದಿರುವ ಡಂಬಳ ಗ್ರಾಮ ಪಂಚಾಯಿತಿಯಲ್ಲಿ ಮತ್ತು ಡಂಬಳ ಗ್ರಾಮದ ಅಂಚೆ ಕಚೇರಿಯಲ್ಲಿ ಆಧಾರ್ ಸೇವೆ ಇಲ್ಲದೆ ಸಮಸ್ಯೆ ಮತ್ತಷ್ಟು ಉಲ್ಬಣಗೊಂಡಿದೆ.




> ಡಂಬಳ 20 ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಇರುವ ಗ್ರಾಮವಾಗಿದೆ ಮತ್ತು ಗುಡ್ಡಗಾಡು ಪ್ರದೇಶವುಳ್ಳ ಗ್ರಾಮಗಳಿಗೆ ಡಂಬಳ ಗ್ರಾಮ ಸಮೀಪವಿದ್ದು, ಆಧಾರ್ ನೋಂದಣಿ ಕೇಂದ್ರದ ಅವಶ್ಯಕತೆಯಿದೆ. ಶೀಘ್ರದಲ್ಲಿಯೇ ಡಂಬಳದಲ್ಲಿ ಆಧಾರ್ ನೋಂದಣಿ/ತಿದ್ದುಪಡಿ ಕೇಂದ್ರ ತೆರೆಯಬೇಕು.
>
> **– ವಿನಾಯಕ ಕಟ್ಟೆಣ್ಣವರ.**
> ಸಾಮಾಜಿಕ ಹೋರಾಟಗಾರ, ಡಂಬಳ.

ಡಂಬಳ ಹೋಬಳಿಯ ಹಳ್ಳಿಕೇರಿ, ಹಳ್ಳಿಗುಡಿ, ಪೇಠಾ ಆಲೂರ, ಡೋಣಿ, ಡೋಣಿ ತಾಂಡ, ಅತ್ತಿಕಟ್ಟಿ ತಾಂಡ, ಹಿರೇವಡ್ಡಟ್ಟಿ, ಚಿಕ್ಕವಡ್ಡಟ್ಟಿ, ಬಸಾಪುರ, ಮುರಡಿ, ಮುರಡಿ ತಾಂಡ ಸೇರಿದಂತೆ ಕಪ್ಪತ್ತಗುಡ್ಡ ಭಾಗದಲ್ಲಿ ಬರುವ ಗ್ರಾಮಗಳ ಗ್ರಾಮಸ್ಥರು ಆಧಾರ್ ಕಾರ್ಡ್ ನೋಂದಣಿ, ತಿದ್ದುಪಡಿಗಾಗಿ ಪರಿತಪಿಸುವಂತಾಗಿದೆ.

ಇ-ಖಾತಾ ಸೌಲಭ್ಯ ಪಡೆಯಲು, ಎಸ್‌ಎಸ್‌ಎಲ್‌ಸಿ ಪರೀಕ್ಷೆ ಮತ್ತು ದಾಖಲಾತಿಗೆ ಆಧಾರ್ ಕಾರ್ಡ್ ಪ್ರಮುಖವಾಗಿದ್ದು, ಆಧಾರ್ ಕಾರ್ಡಿನಲ್ಲಿರುವಂತೆ ಎಲ್ಲ ದಾಖಲಾತಿಗಳನ್ನು ಭರ್ತಿ ಮಾಡಬೇಕಾಗಿದೆ. ಅಂದು ಕಂಪ್ಯೂಟರ್ ಆಪರೇಟರ್‌ಗಳು ಮಾಡಿರುವ ತಪ್ಪಿನಿಂದಾಗಿ ಅಥವಾ ಪಾಲಕರು ನೀಡಿರುವ ತಪ್ಪು ಮಾಹಿತಿಯಿಂದಾಗಿ ಆಧಾರ್ ಕಾರ್ಡ್‌ಗಳಲ್ಲಿ ವ್ಯಕ್ತಿಯ ತಪ್ಪು ಹೆಸರು, ಹುಟ್ಟಿದ ದಿನಾಂಕ, ಮೊಬೈಲ್ ಸಂಖ್ಯೆ, ವಿಳಾಸ, ಅಡ್ಡ ಹೆಸರು ಮುಂತಾದ ಅನೇಕ ದೋಷಗಳು ಕಂಡುಬರುತ್ತವೆ. ಇದನ್ನು ಎಸ್‌ಎಸ್‌ಎಲ್‌ಸಿಯಲ್ಲಿಯೇ ಸರಿಪಡಿಸಿದರೆ ಮಾತ್ರ ಮುಂದಿನ ಸಮಸ್ಯೆ ತಪ್ಪುತ್ತದೆ. ಇಲ್ಲದಿದ್ದರೆ ಅನವಶ್ಯಕವಾಗಿ ಇಲಾಖೆಯಿಂದ ಇಲಾಖೆಗೆ ಅಲೆಯುವ ಸ್ಥಿತಿ ಬರುತ್ತದೆ.

ಉಪತಹಸೀಲ್ದಾರ ಕಚೇರಿಯಲ್ಲಿ ಸರ್ಕಾರದ ವತಿಯಿಂದ ಆಧಾರ್ ಕಾರ್ಡ್ ನೋಂದಣಿ ಹಾಗೂ ತಿದ್ದುಪಡಿ ವ್ಯವಸ್ಥೆ ಕೆಲ ತಿಂಗಳ ಹಿಂದೆ ಇತ್ತು. ಆದರೆ ಇದೀಗ ಅದನ್ನೂ ಸ್ಥಗಿತಗೊಳಿಸಲಾಗಿದೆ. ಆಧಾರ್ ಕಾರ್ಡ್ ನವೀಕರಣ ಮತ್ತು ಹೊಸ ಕಾರ್ಡ್ ಮಾಡಿಸಲು ಡಂಬಳ ಹೋಬಳಿಯ ಗ್ರಾಮಸ್ಥರು ಹರಸಾಹಸ ಪಡುವಂತಾಗಿದೆ.

ಈ ಸಮಸ್ಯೆ ಪರಿಹರಿಸಲು ಅಧಿಕಾರಿಗಳು ತಕ್ಷಣ ಡಂಬಳ ಗ್ರಾಮದ ಅಂಚೆ ಕಚೇರಿ ಅಥವಾ ಡಂಬಳ ಗ್ರಾಮ ಪಂಚಾಯಿತಿ, ಉಪತಹಸೀಲ್ದಾರ ಕಚೇರಿಯಲ್ಲಿ ಆಧಾರ್ ಕೇಂದ್ರ ಪ್ರಾರಂಭಿಸುವ ಕ್ರಮ ಕೈಗೊಳ್ಳಬೇಕಿದೆ.

# ದಾವಣಗೆರೆಯ ಅಭಿವೃದ್ಧಿಗೆ ಶಾಮನೂರು ಬೆನ್ನೆಲುಬು

▸▸ಮೊದಲನೇ ಪುಟದಿಂದ

ಕಾಣುತ್ತಿದ್ದ ಅವರು ಎಂದಿಗೂ ಭೇದಭಾವ ಮಾಡಲಿಲ್ಲ. ಆರ್ಥಿಕವಾಗಿ ಸಂಕಷ್ಟ ಎಂದು ಹೋದವರಿಗೆ ಸದಾಕಾಲ ನೆರವಾಗುತ್ತಿದ್ದರು ಎಂದು ಸ್ಮರಿಸಿದರು.

ವಸತಿ ಸಚಿವ ಬಿ.ಝಡ್. ಜಮೀರ್ ಅಹ್ಮದ್‌ಖಾನ್ ಮಾತನಾಡಿ, ಬಹಳ ವರ್ಷಗಳಿಂದ ರಾಜಕಾರಣದಲ್ಲಿದ್ದ ಶಾಮನೂರು ಶಿವಶಂಕರಪ್ಪನವರು ನಮಗೆಲ್ಲಾ ಮಾದರಿಯಾಗಿದ್ದಾರೆ. ಕ್ಷೇತ್ರದ ಕೆಲಸಗಳಿಗಾಗಿ ಇಳಿ ವಯಸ್ಸಿನಲ್ಲಿಯೂ ನನ್ನನ್ನು ಕಾಣಲು ಬರುತ್ತಿದ್ದರು. ಅವರ ಮಗ ಎಸ್.ಎಸ್. ಮಲ್ಲಿಕಾರ್ಜುನ್ ಸಚಿವರಾದ್ದರಿಂದ, ನೀವು ಸಚಿವರಾಗುವಂತೆ ನಾನು ಕೇಳಿದರೆ, 'ಮುಖ್ಯಮಂತ್ರಿಯವರನ್ನು ಒಪ್ಪಿಸು ಈಗಲೂ ಸಚಿವನಾಗಿ ಕಾರ್ಯನಿರ್ವಹಿಸುತ್ತೇನೆ' ಎನ್ನುವ ಉತ್ಸಾಹದ ಮಾತು ಅವರಿಂದ ಕೇಳಿಬರುತ್ತಿತ್ತು. ಅವರ ನಿಧನ ತುಂಬಲಾರದ ನಷ್ಟ ಉಂಟು ಮಾಡಿದೆ ಎಂದು ಹೇಳಿದರು.

ಶ ಾ ಸ ್ ಕ ್ ರ ಾ ದ ್ ಎಸ್.ಸುರೇಶ್‌ಕುಮಾರ್, ಸಿ.ಎನ್. ಬಾಲಕೃಷ್ಣ, ಯು.ಬಿ. ಬಣಕಾರ್, ಸಿ.ಸಿ. ಪಾಟೀಲ್, ಶಿವಲಿಂಗೇಗೌಡ, ಅಪ್ಪಾಜಿ ಸಿ.ಎಸ್. ನಾಡಗೌಡರ್, ಡಾ. ಹೆಚ್.ಡಿ. ರಂಗನಾಥ್, ಸಿದ್ದು ಸವದಿ, ಜೆ.ಟಿ. ಪಾಟೀಲ್, ಸಿಮೆಂಟ್ ಮಂಜು, ಅರಗ ಜ್ಞಾನೇಂದ್ರ, ಎನ್.ಟಿ. ಶ್ರೀನಿವಾಸ ಶಾಮನೂರು ಶಿವಶಂಕರಪ್ಪನವರಿಗೆ ನುಡಿನಮನ ಸಲ್ಲಿಸಿದರು. ಮೃತರ ಗೌರವಾರ್ಥ ಒಂದು ನಿಮಿಷಗಳ ಕಾಲ ಮೌನ ಆಚರಿಸಲಾಯಿತು. ವಿಧಾನಸಭೆ ಕಲಾಪವನ್ನು ಮೊಟಕುಗೊಳಿಸಿ ಮಂಗಳವಾರ ಬೆಳಿಗ್ಗೆ 9.30ಕ್ಕೆ ಮುಂದೂಡಲಾಯಿತು.

# ಬೆಳ್ಳಟ್ಟಿಯಲ್ಲಿ ಉಚಿತ ನೇತ್ರ ತಪಾಸಣಾ ಶಿಬಿರ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಬೆಳ್ಳಟ್ಟಿ ಗ್ರಾಮದ ಜಿ.ಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ ಅಭಿಮಾನಿ ಬಳಗದ ವತಿಯಿಂದ ಅವರ 58ನೇ ಜನ್ಮದಿನದ ಪ್ರಯುಕ್ತ ಹುಬ್ಬಳ್ಳಿಯ ಜನಪ್ರಿಯ ಆಸ್ಪತ್ರೆ ಸಹಯೋಗದೊಂದಿಗೆ ಉಚಿತ ಕಣ್ಣಿನ ಆರೋಗ್ಯ ತಪಾಸಣಾ ಶಿಬಿರ ನೆರವೇರಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಧರ್ಮಸ್ಥಳ ಜನಜಾಗೃತಿ ವೇದಿಕೆ ರಾಜ್ಯಾಧ್ಯಕ್ಷ ನಟರಾಜ ಬಾದಾಮಿ, ಮಹಾಜನಶೆಟ್ಟರ ನನಗೆ ದಶಕಗಳ ಪರಿಚಯ. ನಾನು ಬಳ್ಳಾರಿ ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷನಾಗಿದ್ದಾಗ ಅವರು ಗದಗ ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷರಾಗಿದ್ದರು. ಇವರ ನಿಸ್ವಾರ್ಥ ಸೇವೆ ಸಮಾಜಕ್ಕೆ ಇನ್ನಷ್ಟು ಅಗತ್ಯವಿದೆ ಎಂದರು.

ಬನ್ನಿಕೊಪ್ಪದ ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ, ಬೆಳ್ಳಟ್ಟಿಯ ರಾಮಲಿಂಗೇಶ್ವರ ದಾಸೋಹಮಠದ ಬಸವರಾಜ ಸ್ವಾಮೀಜಿ, ಶಾಸಕ ಡಾ. ಚಂದ್ರು ಲಮಾಣಿ, ಹೇಮಗಿರೀಶ ಹಾವಿನಾಳ, ನಾಗರಾಜ ಕುಲಕರ್ಣಿ, ಡಾ. ಭೀಮಸಿಂಗ್ ರಾಠೋಡ, ಶಿವಪ್ಪ ಅಂಕದ, ಶಾಂತಣ್ಣ ಕಲಕೇರಿ, ಸಣ್ಣವೀರಪ್ಪ ಹಳ್ಳೆಪ್ಪನವರ, ಸಿ.ಸಿ. ನೂರಶೆಟ್ಟರ, ಬಸವರಾಜ ಪಲ್ಲೇದ, ತಿಪ್ಪಣ್ಣ ಕೊಂಚಿಗೇರಿ, ಜಾನು ಲಮಾಣಿ, ದೇವಪ್ಪ ಲಮಾಣಿ, ಶಿದ್ರಾಮಪ್ಪ ಮೊರಬದ, ತಿಮ್ಮರಡ್ಡಿ ಮರಡ್ಡಿ, ಮೋಹನ ಗುತ್ತೆಮ್ಮನವರ, ಮಹೇಶ ಬಡ್ನಿ, ಕೊಟ್ರೇಶ ಅಕ್ಕೂರ, ಬಿ.ಎಂ. ಯರಕದ, ಡಾ. ಎಸ್.ಎಂ. ಬುರಬುರೆ ವಿರೇಶ ಪಸಾರದ, ಮಹಾಂತಯ್ಯ ಕಲ್ಮಠ, ಮಂಜುನಾಥ ಸೊನಗೋಜಿ, ಆನಂದ ಹಿರೆಹೋಳಿ, ಚನ್ನು ಅಕ್ಕೂರ, ಮಂಜುನಾಥ ಉಳ್ಳಾಗಡ್ಡಿ, ಮಂಜುನಾಥ ಅಂಗಡಿ, ರಮೇಶ ಮರಡ್ಡಿ, ಶ್ರೀನಿವಾಸ ಅಳವಂಡಿ, ರಮೇಶ ಭರಮರಡ್ಡಿ, ರಫೀಕ್ ಬಡಿಗೇರ, ಸತೀಶ ಕೆರೂರ, ಎಂ.ಬಿ. ಹಾವೇರಿ, ಎಸ್.ಸಿ. ದೈವಜ್ಞಾಚಾರ್ಯ, ವೀರಣ್ಣ ಅಂಗಡಿ, ವೀರನಗೌಡ ಪಾಟೀಲ, ರಬ್ಬಾನಿ ಚೌರಿ, ಪ್ರಕಾಶ ಜೀರಮಕಳ್ಳಿ, ಮಹೇಶ ಶೆಟ್ಟಿಕೇರಿ ಮುಂತಾದವರು ಉಪಸ್ಥಿತರಿದ್ದರು.

# ಆಮೆಗತಿಯಲ್ಲಿ ಸಾಗುತ್ತಿದೆ ಬೆಳೆ ಖರೀದಿ

▸▸ಮೊದಲನೇ ಪುಟದಿಂದ

ಎದುರಾಗಿತ್ತು. ಕೆಎಂಎಫ್‌ನ ಲಾಗಿನ್‌ನಲ್ಲಿ ನೋಂದಣಿಯಾದ ರೈತರು ಧಾರವಾಡಕ್ಕೆ ಬೆಳೆಯನ್ನು ತೂಕ ಮಾಡಿ ಅಲ್ಲಿಯೇ ಕೊಡಬೇಕು ಎನ್ನುವ ವದಂತಿಯಿಂದ ರೈತರು ಗೊಂದಲಕ್ಕೀಡಾದರು. ಆದರೆ ಇಲ್ಲಿಯೇ ತೆಗೆದುಕೊಳ್ಳಲಾಗುವದು ಎನ್ನುವ ಮಾಹಿತಿ ನೀಡಲಾಯಿತು. ನಂತರ ಫೆಡರೇಷನ್‌ನ ಲಾಗಿನ್ ನೋಂದಣಿಯೂ ಸಹ ಇದೇ ರೀತಿ ನೆಟ್‌ವರ್ಕ್ ಸಮಸ್ಯೆ ಎದುರಿಸಿತು. ಒಟ್ಟಿನಲ್ಲಿ ಸಾವಿರಾರು ರೈತರು ಗೋವಿನಜೋಳ ಮಾರಾಟಕ್ಕೆ ಹೆಸರು ನೋಂದಾಯಿಸಿಕೊಂಡು, ಖರೀದಿ ಪ್ರಾರಂಭವಾಗುವದನ್ನು ಕಾಯುತ್ತಿದ್ದರು.

> ತೂಕ ಮಾಡುವಾಗ ಹಮಾಲಿ ಮಾಡುವ ಕಾರ್ಮಿಕರು ಹಮಾಲಿ ದರವನ್ನು ಸಹ ಸರಿಯಾಗಿ ನಿರ್ಧರಿಸಿಲ್ಲ ಎನ್ನಲಾಗಿದೆ. ಎಪಿಎಂಸಿ ನೀಡುವಂತೆ ಹಮಾಲಿ ದರ ಸಹ ನಿರ್ದಿಷ್ಟವಾಗಿಲ್ಲ. ಹಮಾಲಿ ದರ ಕಡಿಮೆಯಾದರೆ ನಮಗೆ ಕಷ್ಟವಾಗುತ್ತದೆ ಎನ್ನುತ್ತಾರೆ ಕೂಲಿ ಕಾರ್ಮಿಕರು. ಇಂತಹ ಗೊಂದಲಗಳೆಲ್ಲವನ್ನು ಬಗೆಹರಿಸಿ ರೈತರಿಗೆ ಭರವಸೆ ನೀಡುವ ಕಾರ್ಯವಾಗಬೇಕಾಗಿದೆ.

ಕೊನೆಗೆ ಶುಕ್ರವಾರ ಬೆಂಬಲ ಬೆಲೆ ಖರೀದಿ ಕೇಂದ್ರದಲ್ಲಿ ಗೋವಿನಜೋಳ ಖರೀದಿ ಪ್ರಾರಂಭಿಸಲಾಯಿತು. ಎರಡು ದಿನಗಳ ಕಾಲ ಅಧಿಕಾರಿಗಳು ಗೋವಿನಜೋಳದ ಕಾಳುಗಳ ತೇವಾಂಶ ಪರೀಕ್ಷೆ ಮಾಡಿ ಖರೀದಿಸುವ ಕಾರ್ಯ ಪ್ರಾರಂಭಿಸಿದರು. ಇದಕ್ಕೂ ಸಹ ರೈತರು ಕಾಯುವಂತಾಯಿತು. ನಂತರ ತೂಕ ಪ್ರಕ್ರಿಯೆ ಪ್ರಾರಂಭ ಮಾಡಲಾಗಿದ್ದರೂ ಅದು ಸಹ ನಿಧಾನಗತಿಯಲ್ಲಿ ಸಾಗುತ್ತಿದ್ದು ಅದಕ್ಕೂ ರೈತರು ಕಾಯುವಂತಾಗಿದೆ.

ಸೋಮವಾರ ವಾಹನಗಳಲ್ಲಿ ಗೋವಿನಜೋಳದ ಚೀಲಗಳನ್ನು ತುಂಬಿಕೊಂಡು ಬಂದಿದ್ದ ರೈತರು ತಮ್ಮ ಸರದಿಗಾಗಿ ಕಾಯುತ್ತಿದ್ದರು. ಅನೇಕ ರೈತರು ನೋಂದಣಿಯಾಗದಿರುವದಕ್ಕೂ ಅಸಮಾಧಾನ ವ್ಯಕ್ತಪಡಿಸುತ್ತಿದ್ದರು. ಅಲ್ಲದೆ ಒಂದು ಎಕರೆಗೆ 12 ಕ್ವಿಂಟಲ್ ಮಾತ್ರ ಖರೀದಿ ಎನ್ನಲಾಗಿದ್ದರೂ ಕೆಲವು ರೈತರು ಪ್ರತಿ ರೈತರಿಗೆ 50 ಕ್ವಿಂಟಲ್ ಎನ್ನುತ್ತಿರುವುದೂ ಗೊಂದಲ ಮೂಡಿಸಿದರೆ, ತೂಕ ಮಾಡಿಕೊಳ್ಳುವದು ಯಾವಾಗ, ದುಡ್ಡು ಬರುವದು ಯಾವಾಗ ಎನ್ನುವದು ರೈತರಿಗೆ ಬಿಡಿಸಲಾರದ ಪ್ರಶ್ನೆಯಂತೆ ಕಾಡುತ್ತಿದೆ ಎನ್ನುತ್ತಾರೆ ಗೊಜನೂರಿನ ರೈತರಾದ ನಿಂಗನಗೌಡ ಪಾಟೀಲ, ಮಹಾಂತಗೌಡ ಪಾಟೀಲ, ರಮೇಶ ಬಾಕಳೆ ಮುಂತಾದವರು.

# 'ಬಾರೋ ಬಾರೋ ಚಂದ್ರಮ' ಕೃತಿಗೆ ರಾಷ್ಟ್ರಕೂಟ ಸಾಹಿತ್ಯಶ್ರೀ ರಾಜ್ಯ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ಹೊಂಬೆಳಕು ಸಾಂಸ್ಕೃತಿಕ ಸಂಘ ಬೆಳಗಾವಿ ಸಂಸ್ಥೆಯು ಕಳೆದ 26 ವರ್ಷಗಳಿಂದ ಆಯ್ದ ಅತ್ಯುತ್ತಮ ಕೃತಿಗಳಿಗೆ 'ರಾಷ್ಟ್ರಕೂಟ ಸಾಹಿತ್ಯಶ್ರೀ' ರಾಜ್ಯ ಪ್ರಶಸ್ತಿ ನೀಡುತ್ತ ಬಂದಿದ್ದು, 2024ನೇ ಸಾಲಿಗಾಗಿ ಅತ್ಯುತ್ತಮ ಗದುಗಿನ ಮಕ್ಕಳ ಸಾಹಿತಿ ಡಾ. ತಯಬಅಲಿ ಅ.ಹೊಂಬಳರವರ ಮಕ್ಕಳ ಸಚಿತ್ರ ಕಥಾ ಸಂಕಲನ 'ಬಾರೋ ಬಾರೋ ಚಂದ್ರಮ' ಕೃತಿ ಆಯ್ಕೆಯಾಗಿದೆ.




ಹೊಂಬೆಳಕು ಸಾಂಸ್ಕೃತಿಕ ಸಂಘ ಬೆಳಗಾವಿ ಹಾಗೂ ಧಾರವಾಡದ ಶ್ರೀ ಚೆನ್ನಲೀಲಾ ಟ್ರಸ್ಟ್ ಸಂಯುಕ್ತವಾಗಿ ಕೊಡಮಾಡುವ ರಾಜ್ಯಮಟ್ಟದ ಪ್ರಶಸ್ತಿಯನ್ನು ಡಿ. 27ರಂದು ಬೆಳಗಾವಿ ಕನ್ನಡ ಸಾಹಿತ್ಯ ಭವನದಲ್ಲಿ ಪ್ರದಾನ ಮಾಡಲಾಗುವುದು. ಪ್ರಶಸ್ತಿಗೆ ಆಯ್ಕೆಯಾದ ಡಾ. ತಯಬಅಲಿ ಅ. ಹೊಂಬಳರಿಗೆ ಬೆಳಗಾವಿ ಹೊಂಬೆಳಕು ಸಾಂಸ್ಕೃತಿಕ ಸಂಘದ ಆಯ್ಕೆ ಸಮಿತಿ ಸದಸ್ಯರಾದ ಸ.ರಾ. ಸುಳಕೂಡೆ, ಶಶಿಕಲಾ ಪಾವಸೆ, ಲೀಲಾ ಕಲಕೋಟಿ, ಆರ್.ಬಿ. ಬನಶಂಕರಿ, ಡಾ. ಗೀತಾಂಜಲಿ ಕುರಡಗಿ, ಎ. ಮಾವುತ, ಡಾ. ಜಗದೀಶ ಹಾರೋಗೊಪ್ಪ, ಮಮತಾ ಶಂಕರ ಸಮಿತಿಯ ಪರವಾಗಿ ಅಭಿನಂದಿಸಿದ್ದಾರೆ.

# ಡಿ. 18ರಂದು ವಿದ್ಯುತ್ ವ್ಯತ್ಯಯ

**■ವಿಜಯಸಾಕ್ಷಿ ಸುದ್ದಿ, ಮುಂಡರಗಿ**

110 ಕೆ.ವ್ಹಿ ಮುಂಡರಗಿ, ಡಂಬಳ ಮತ್ತು ಶಿಂಗಟಾಲೂರ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ಡಿ. 18ರಂದು ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

ಸದರಿ ಉಪಕೇಂದ್ರಗಳಿಂದ ಪೂರೈಕೆಯಾಗುವ 110 ಕೆ.ವ್ಹಿ. ವಿಜಯನಗರ ಶುಗರ್ಸ್, ಬೀಡನಾಳ ನೀರಾವರಿ, 33 ಕೆ.ವ್ಹಿ. ನೀರು ಸರಬರಾಜು ಶಿಂಗಟಾಲೂರ, ಕೆ.ಎನ್. ಎನ್.ಎಲ್, 110 ಕೆ.ವ್ಹಿ. ಎನರ್ಕಾನ್ ವಿಂಡ್, 110 ಕೆ.ವ್ಹಿ ಸುಜಲಾನ ವಿಂಡ್, 110 ಕೆ.ವ್ಹಿ ಚರ್ಚಿಹಾಳ, ಅಖಿಲಗ್ಯಾ ಸೋಲಾರ್ ಮತ್ತು ಎಲ್ಲಾ ನಗರ, ಕೈಗಾರಿಕಾ, ನೀರಾವರಿ ಪಂಪ್‌ಸೆಟ್‌ಗಳ ಮಾರ್ಗ, ಕುಡಿಯುವ ನೀರು ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ವಿನಂತಿಸಿದೆ.



ಬೈಂದೂರು ಶಾಸಕರಾದ ಗುರುರಾಜಶೆಟ್ಟಿ ಗಂಟಿಹೊಳೆ ಗದಗ ಜಿಲ್ಲೆಗೆ ಆಗಮಿಸಿದ್ದ ಸಂದರ್ಭದಲ್ಲಿ ಗದಗ ಜಿಲ್ಲಾ ಭಾರತೀಯ ಜನತಾ ಪಾರ್ಟಿಯ ವತಿಯಿಂದ ಸನ್ಮಾನಿಸಿ, ಗೌರವಿಸಲಾಯಿತು. ಈ ಸಂದರ್ಭದಲ್ಲಿ ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜಣ್ಣ ಕುರುಡಗಿ, ಗದಗ ಜಿಲ್ಲಾ ಬಿಜೆಪಿ ಪ್ರಕೋಷ್ಠಗಳ ಸಹ ಸಂಯೋಜಕ ರಮೇಶ ಸಜ್ಜಗಾರ, ಬಿಜೆಪಿ ಹಿರಿಯರಾದ ಶ್ರೀಪತಿ ಉಡುಪಿ, ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಬಿಜೆಪಿ ವಿಸ್ತರಾಕ್ ರವಿ ಮಾನ್ವಿ, ಬಿಜೆಪಿ ಬಿ.ಎಲ್.ಎ ಒನ್ ಮಂಜುನಾಥ್ ಶಾಂತಗೇರಿ, ಸಂಗಮೇಶ ಅಂಗಡಿ ಮುಂತಾದವರು ಉಪಸ್ಥಿತರಿದ್ದರು.

### ಕಸಾಪದಿಂದ 'ಓದಿನ ಸುಖ' ಕುರಿತು ಉಪನ್ಯಾಸ ಕಾರ್ಯಕ್ರಮ

# ಪುಸ್ತಕಗಳೇ ಮನುಷ್ಯನ ನಿಜವಾದ ಸಖ

**■ವಿಜಯಸಾಕ್ಷಿ ಸುದ್ದಿ, ಗದಗ**

ಪುಸ್ತಕಗಳಲ್ಲಿ ಅಪಾರ ಜ್ಞಾನ ಅಡಗಿದ್ದು, ಮನುಷ್ಯನ ಒಟ್ಟು ವ್ಯಕ್ತಿತ್ವದ ಬೆಳವಣಿಗೆಗೆ ಸಹಕಾರಿಯಾಗಿವೆ. ಪುಸ್ತಕದ ಹೊರತಾಗಿ ದೊರಕುವ ವಸ್ತುಗಳಿಂದ ಸಿಗುವ ಸಂತೋಷ ತಾತ್ಕಾಲಿಕವಾದುದು. ಆದರೆ ಪುಸ್ತಕದ ಓದಿನಿಂದ ದೊರೆಯುವ ಸುಖ ಶಾಶ್ವತವಾದುದು. ಪುಸ್ತಕಗಳೇ ಮನುಷ್ಯನ ನಿಜವಾದ ಸಖ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷಡಾ. ಮಾನಸ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಜಿಲ್ಲಾ ಜಾಗೃತ ಸಮಿತಿ ಸದಸ್ಯರಿಗೆ ನೇಮಕಾತಿ ಪತ್ರ ನೀಡಿ ಮಾತನಾಡಿದರು.

ಪುಸ್ತಕದ ಮಹತ್ವವನ್ನು ಇಂದಿನ ಪೀಳಿಗೆಗೆ ತಿಳಿಸಲು ಪ್ರಾಧಿಕಾರ ಮನೆಗೊಂದು ಗ್ರಂಥಾಲಯ ಎಂಬ ಯೋಜನೆಯನ್ನು ಜಾರಿಗೊಳಿಸುತ್ತಿದೆ. ಉತ್ತಮ ಚಟುವಟಿಕೆಗಳನ್ನು ಸಂಘಟಿಸುವ ಗ್ರಂಥಾಲಯಗಳಿಗೆ ಪ್ರಶಸ್ತಿ ನೀಡುವುದಾಗಿ ತಿಳಿಸಿದರು.

ಜಾಗೃತ ಸಮಿತಿಯಜಿಲ್ಲಾ ಸಂಚಾಲಕ ಎ.ಎಸ್. ಮಕಾನದಾರ ಮಾತನಾಡಿ, ಜಿಲ್ಲಾ ಹಂತದಲ್ಲಿ ಸಿರಿಗನ್ನಡ ಪುಸ್ತಕ ಮಳಿಗೆಯನ್ನು ಪುನರಾರಂಭಗೊಳಿಸಬೇಕು. ಅಲ್ಲದೇ ಲೇಖಕರ ಕೃತಿಗಳನ್ನು ಖರೀದಿಸಿ ಪ್ರೋತ್ಸಾಹಿಸಬೇಕು. ಜಿಲ್ಲಾ ಹಂತದಲ್ಲಿ ಪುಸ್ತಕ ಸಂಸ್ಕೃತಿಯನ್ನು ಬೆಳೆಸುವ ದಿಸೆಯಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವದೆಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಮನೆಗೊಂದು ಗ್ರಂಥಾಲಯ ಯೋಜನೆಯ ಕರಪತ್ರವನ್ನು ಬಿಡುಗಡೆಗೊಳಿಸಲಾಯಿತು. ಕನ್ನಡ ಪುಸ್ತಕ ಪ್ರಾಧಿಕಾರದ ಜಿಲ್ಲಾ ಜಾಗೃತ ಸಮಿತಿ ಸದಸ್ಯರಾದ ಆರ್.ಎಫ್. ಲೊಟಗೇರಿ, ಡಾ. ಸಂಗಮೇಶ ತಮ್ಮನಗೌಡ್ರ, ರವಿ ದೇವರಡ್ಡಿ, ಮಂಜುಳಾ ವೆಂಕಟೇಶಯ್ಯ, ರಾಜೇಶ್ವರಿ ಬಡ್ನಿ, ಅಂದಯ್ಯ ಅರವಟಗಿಮಠ, ಎಸ್.ಕೆ. ಆಡಿನ, ಬಸವರಾಜ ಬಡಿಗೇರ, ಸಂತೋಷ ಅಂಗಡಿ ಅವರಿಗೆ ನೇಮಕಾತಿ ಪತ್ರ ವಿತರಿಸಲಾಯಿತು.

ಲಕ್ಕುಂಡಿ ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಅಮೀರ ನಾಯಕ ವೇದಿಕೆ ಮೇಲೆ ಉಪಸ್ಥಿತರಿದ್ದರು. ಡಿ.ಎಸ್. ಬಾಪುರಿ ಸ್ವಾಗತಿಸಿದರು. ದತ್ತಪ್ರಸನ್ನ ಪಾಟೀಲ ನಿರೂಪಿಸಿದರು. ಡಾ. ರಶ್ಮಿ ಅಂಗಡಿ ವಂದಿಸಿದರು.

ಕಾರ್ಯಕ್ರಮದಲ್ಲಿ ಚಂದ್ರಶೇಖರ ವಸ್ತ್ರದ, ಕೆ.ಎಚ್. ಬೇಲೂರ, ಡಾ. ಜಿ.ಬಿ. ಪಾಟೀಲ, ಜಿ.ಎ. ಪಾಟೀಲ, ರತ್ನಕ್ಕ ಪಾಟೀಲ, ಶಿಲ್ಪಾ ಮ್ಯಾಗೇರಿ, ಎಂ.ಎನ್. ಕಾಮನಹಳ್ಳಿ, ಬಿ.ಬಿ. ಹೊಳಗುಂದಿ, ಎಸ್.ಯು. ಸಜ್ಜನಶೆಟ್ಟರ, ರಾಜಶೇಖರ ಕರಡಿ, ಅಶೋಕ ಸತ್ಯರಡ್ಡಿ, ಶಕುಂತಲಾ ಗಿಡ್ನಂದಿ, ಜಯನಗೌಡ ಪಾಟೀಲ, ಅಮರೇಶ ರಾಂಪೂರ, ರತ್ನಾ ಪುರಂತರ, ಶಶಿಕಾಂತ ಕೊರ್ಲಹಳ್ಳಿ, ಸಿ.ಕೆ.ಎಚ್. ಕಡಣಿ ಶಾಸ್ತ್ರೀ, ಎಸ್. ಆರ್. ಚನ್ನಪಗೌಡರ, ಉಮಾ ಕಣವಿ, ವಿ.ಎಸ್. ದಿಂಡೂರ, ರಾಜಶೇಖರ ದಾನರಡ್ಡಿ, ಬಸವರಾಜ ನೆಲಜೇರಿ, ರಾಜೇಂದ್ರ ಗಡಾದ, ದಿಲೀಪಕುಮಾರ ಮುಗಳಿ, ಬಸವರಾಜ ಗಣಪ್ಪನವರ, ದೇವೇಂದ್ರ ನಾಯಕ, ಪ್ರಸನ್ನಕುಮಾರ ಇನಾಮದಾರ, ಮಹಾಂತೇಶ ಹುಚ್ಚಮ್ಮನವರ, ಕೆ.ಐ. ಮುಲ್ಲಾ, ಎಂ.ಸಿ. ದೊಡ್ಡಮನಿ, ಬಿಯಾಮಾ ನಾಯಕ, ಅಬ್ದುಲ ಹಮೀದ ನಾಯಕ, ನೀಲಮ್ಮ ಅಂಗಡಿ, ಕಸ್ತೂರಿ ಕಡಗದ, ಪಿ.ಡಿ. ಮುಗಳಿ, ಎಂ.ಜಿ. ಹಾಸಲಕರ, ಸುರೇಶ ಕುಂಬಾರ, ಬಿ.ಎಲ್. ಚವ್ಹಾಣ, ಶಿವರಾಜ ಸಜ್ಜನಶೆಟ್ಟರ, ಕೆ.ಎಸ್. ಬಾಳಿಕಾಯಿ, ಸತೀಶ ಕುಲಕರ್ಣಿ ಮುಂತಾದವರಿದ್ದರು.



ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಸಾಮಾಜಿಕ ಜಾಲತಾಣಗಳ ಭರಾಟೆಯಲ್ಲಿ ವ್ಯಕ್ತಿ ಓದುವ ಸಂಸ್ಕೃತಿಯಿಂದ ವಿಮುಖನಾಗುತ್ತಿದ್ದಾನೆ. ಬಾಲ್ಯದಲ್ಲಿಯೇ ಪುಸ್ತಕ ಪ್ರೀತಿಯನ್ನು ಬೆಳೆಸುವ ದಿಸೆಯಲ್ಲಿ ಪೋಷಕರು ಪ್ರಯತ್ನಿಸಬೇಕು. ಓದುಗರಿಗೆ ಪುಸ್ತಕಗಳು ಸುಲಭವಾಗಿ ದೊರೆಯುವ ದಿಸೆಯಲ್ಲಿ ಪುಸ್ತಕ ಪ್ರಾಧಿಕಾರ ವ್ಯವಸ್ಥೆ ಕಲ್ಪಿಸಬೇಕು. ಅತ್ತಿಮಬ್ಬೆ ಹಾಗೂ ತೋಂಟದ ಸಿದ್ಧಲಿಂಗ ಶ್ರೀಗಳ ಹೆಸರಿನಲ್ಲಿ ಪ್ರಶಸ್ತಿಗಳನ್ನು ನೀಡುವಂತಾಗಬೇಕು ಎಂದು ಅಭಿಪ್ರಾಯಪಟ್ಟರು.

### ಹಣ ಅಕ್ರಮ ವರ್ಗಾವಣೆ ಪ್ರಕರಣ : ಪತ್ರಕರ್ತ ಮಹೇಶ್ ಲಾಂಗಾಗೆ ಸುಪ್ರೀಂ ಕೋರ್ಟ್‌ನಿಂದ ಮಧ್ಯಂತರ ಜಾಮೀನು

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ವಂಚನೆ ಆರೋಪದ ಮೇಲೆ ದಾಖಲಾಗಿರುವ ಎರಡು ಎಫ್‌ಐಆರ್‌ಗಳಿಗೆ ಸಂಬಂಧಿಸಿದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಪತ್ರಕರ್ತ ಮಹೇಶ್ ಲಾಂಗಾ ಅವರಿಗೆ ಅವರಿಗೆ ಸುಪ್ರೀಂ ಕೋರ್ಟ್ ಸೋಮವಾರ (ಡಿ.15) ಮಧ್ಯಂತರ ಜಾಮೀನು ನೀಡಿದೆ.

ಜಿಎಸ್‌ಟಿ ವಂಚನೆ ಆರೋಪದಲ್ಲಿ ಲಾಂಗಾ ಅವರನ್ನು ಮೊದಲು ಅಕ್ಟೋಬರ್ 7,2024 ರಂದು ಬಂಧಿಸಲಾಗಿತ್ತು.

# ಸ್ಮಾರಕ ನಿರ್ಮಾಣಕ್ಕೆ ಮನವಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಕರ್ನಾಟಕ ಏಕೀರಣಕ್ಕಾಗಿ ಶ್ರಮಿಸಿದ ಜಕ್ಕಲಿಯ ಏಕೀಕರಣದ ರೂವಾರಿ ಅಂದಾನಪ್ಪ ದೊಡ್ಡಮೇಟಿ, ಅದರಗುಂಚಿ ಶಂಕರಗೌಡ್ರ ಹಾಗೂ ಹುತಾತ್ಮ ಪೈಲ್ವಾನ್ ರಮ್‌ಜಾನ ಸಾಬ್ ಸ್ಮಾರಕವನ್ನು ನಿರ್ಮಾಣ ಮಾಡುವುದಗಾಗಿ ಕರ್ನಾಟಕ ಮರುನಾಮಕರಣವಾಗಿ 50 ವರ್ಷ ಪೂರೈಸಿದ ನೆನಪಿಗಾಗಿ 2023ರಲ್ಲಿ ಕರ್ನಾಟಕ ಘನ ಸರ್ಕಾರ ಘೋಷಣೆ ಮಾಡಿತ್ತು. ಸದರಿ ಸ್ಮಾರಕದ ಕಾರ್ಯವನ್ನು ತೀವ್ರಗತಿಯಲ್ಲಿ ಪ್ರಾರಂಭಿಸಬೇಕೆಂದು ಶಿರೋಳ-ಭೈರನಹಟ್ಟಿ ದೊರೆಸ್ವಾಮಿ ವಿರಕ್ತಮಠದ ಶಾಂತಲಿಂಗ ಶ್ರೀಗಳು ಸರ್ಕಾರಕ್ಕೆ ಮನವಿ ಮಾಡಿದರು.



ನರೇಗಲ್ಲನಲ್ಲಿ ಭಾನುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಶ್ರೀಗಳು, ಏಕೀಕರಣ ಹೋರಾಟಕ್ಕೆ ಗದಗ ಜಿಲ್ಲೆಯ ಕೊಡುಗೆ ಅಪಾರವಾಗಿದೆ. ಮುಂಬೈ ವಿಧಾನಸಭೆಯಲ್ಲಿ ಕನ್ನಡವನ್ನು ಪ್ರಜ್ವಲಿಸಿದ ಕೀರ್ತಿ ಅಂದಾನಪ್ಪ ದೊಡ್ಡಮೇಟಿಯವರಿಗೆ ಸಲ್ಲುತ್ತದೆ. ಅಂತಹ ಮಹಾನ್ ಹೋರಾಟಗಾರರ ಸ್ಮಾರಕದ ಕನಸು ಕನಸಾಗಿಯೇ ಉಳಿದಿದೆ. ಮುಖ್ಯಮಂತ್ರಿಗಳು ಈ ಕೂಡಲೇ ಸದರಿ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಬಹುಬೇಗನೆ ಸ್ಮಾರಕ ನಿರ್ಮಾಣ ಕಾರ್ಯಕ್ಕೆ ಚಾಲನೆ ನೀಡಿ ಕನ್ನಡಾಭಿನಿಗಳ ಆಶಾಗೋಪುರಕ್ಕೆ ಕಳಶವಾಗಬೇಕು ಎಂದು ಹೇಳಿದರು.

### ಕರ್ನಾಟಕ ರೈತ ಸಂಘ, ಹಸಿರು ಸೇನೆ ಜಿಲ್ಲಾ ಅಧ್ಯಕ್ಷ ಶಂಕರಗೌಡ ಮನವಿ

# ಎಥೆನಾಲ್ ಫ್ಯಾಕ್ಟರಿ ಪ್ರಾರಂಭಕ್ಕೆ ಅಡ್ಡಿಪಡಿಸಬೇಡಿ




**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಎಥೆನಾಲ್ ಫ್ಯಾಕ್ಟರಿ ಪ್ರಾರಂಭದಿಂದ ನಮ್ಮ ಭಾಗದಲ್ಲಿ ಮೆಕ್ಕೆಜೋಳ, ಕಬ್ಬು, ಜೋಳ ಬೆಳೆಯುವ ರೈತರ ಉತ್ಪನ್ನಗಳಿಗೆ ಬೇಡಿಕೆ ಹೆಚ್ಚಿ ಉತ್ತಮ ಬೆಲೆ ಸಿಗಲಿದೆ. ಆದ್ದರಿಂದ ಲಕ್ಷ್ಮೇಶ್ವರ ತಾಲೂಕಿನಲ್ಲಿ ಪ್ರಾರಂಭಗೊಳ್ಳುತ್ತಿರುವ ಎಥೆನಾಲ್ ಫ್ಯಾಕ್ಟರಿ ಪ್ರಾರಂಭಕ್ಕೆ ಸರ್ಕಾರ ಯಾವುದೇ ಅಡೆ-ತಡೆ ಮಾಡಬಾರದು ಎಂದು ಕರ್ನಾಟಕ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಅಧ್ಯಕ್ಷ ಶಂಕರಗೌಡ ಜಯನಗೌಡ್ರು ಹೇಳಿದರು.

ಪಟ್ಟಣದ ಪತ್ರಿಕಾ ಕಾರ್ಯಾಲಯದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

ಇತ್ತೀಚಿನ ವರ್ಷಗಳಲ್ಲಿ ಗದಗ ಜಿಲ್ಲೆ ಸೇರಿ ನೆರೆಯ ಜಿಲ್ಲೆಗಳಲ್ಲೂ ರೈತರು ಅತಿಹೆಚ್ಚು ಮೆಕ್ಕೆಜೋಳ ಬೆಳೆಯುತ್ತಾರೆ. ಈ ವರ್ಷ ಮೆಕ್ಕೆಜೋಳಕ್ಕೆ ಬೇಡಿಕೆ ಇಲ್ಲದ್ದರಿಂದ ರೈತರು ಬೆಂಬಲ ಬೆಲೆಗಾಗಿ ಉಪವಾಸ ಸತ್ಯಾಗ್ರಹ ಮಾಡಬೇಕಾಯಿತು. ಆದಾಗ್ಯೂ ಅನೇಕ ರೈತರು ಬೆಲೆ ಕುಸಿತದಿಂದ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೃಷಿ ಪೂರಕ ಕೈಗಾರಿಕೆಗಳು ಪ್ರಾರಂಭಗೊಳ್ಳಬೇಕು. ಎಥೆನಾಲ್ ಉತ್ಪಾದನೆಗಾಗಿ ಕೃಷಿ ಉತ್ಪನ್ನಗಳನ್ನು ಖರೀದಿಸುವುದರಿಂದ ರೈತರಿಗೆ ಹೊಸ ಮಾರುಕಟ್ಟೆ ಲಭ್ಯವಾಗುತ್ತದೆ. ಲಕ್ಷ್ಮೇಶ್ವರ ತಾಲೂಕಿನ ಹೀರೆಮಲ್ಲಾಪೂರ ಗ್ರಾಮದಲ್ಲಿ ಎಥೆನಾಲ್ ಫ್ಯಾಕ್ಟರಿ ಪ್ರಾರಂಭವಾತ್ತಿರುವುದು ಸಂತಸದ ವಿಚಾರ. ರೈತರರಿಗೆ ಲಾಭ, ಉದ್ಯೋಗ ಅವಕಾಶ, ಅಭಿವೃದ್ಧಿಗೆ ಕಾರಣವಾಗುತ್ತದೆ. ಕೃಷಿ ತ್ಯಾಜ್ಯವನ್ನು ಉಪಯುಕ್ತ ಸಂಪನ್ಮೂಲವಾಗಿ ಪರಿವರ್ತಿಸಿ ಗ್ರಾಮೀಣ ಆರ್ಥಿಕತೆಗೂ ನೆರವಾಗುತ್ತದೆ. ಹಾಗಾಗಿ ಕಂಪನಿ ನಿರ್ಮಾಣಕ್ಕೆ ಸರಕಾರ ಅವಕಾಶ, ಅನುಮತಿ ನೀಡಬೇಕು ಎಂದರು.

ಈ ಸಂದರ್ಭದಲ್ಲಿ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾಧ್ಯಕ್ಷ ಶಂಕರಗೌಡ ಜಾಯನಗೌಡ್ರು, ಆದೇಶ ಹುಲಗೂರು, ಲಕ್ಷ್ಮವ್ವ ಮಳ್ಳಿಗಟ್ಟಿ, ಶರಣಪ್ಪ ಕಮ್ಮಾರ, ಯಲ್ಲಪ್ಪ ವಾಲ್ಮೀಕಿ, ಶಿವಪ್ಪನಾಯಕ ಮಳ್ಳಿಗಟ್ಟಿ, ಅದ್ಮಲ್ ರಹಮಾನ್ ಕಂಡೊಳಿ, ಈಶ್ವರ ಮಳ್ಳಿಗಟ್ಟಿ, ಮುತ್ತವ್ವ ವಾಲ್ಮೀಕಿ ಮತ್ತಿತರರಿದ್ದರು.

ಸರ್ಕಾರ ಹೀರೆಮಲ್ಲಾಪೂರ ಗ್ರಾಮದಲ್ಲಿನ ಎಥನಾಲ್ ಫ್ಯಾಕ್ಟರಿ ಪ್ರಾರಂಭಿಸಲು ಯಾವುದೇ ಅಡತಡೆ ಬರದಂತೆ ನೋಡಿಕೊಳ್ಳಬೇಕೆಂದು ಡಿ. 15ರ ಸೋಮವಾರ ಬೆಳಿಗ್ಗೆ 10 ಗಂಟೆಯಿಂದ ರೈತ ಸಂಘ ಹಾಗೂ ಹಸಿರು ಸೇನೆಯ ವತಿಯಿಂದ ಫ್ಯಾಕ್ಟರಿ ಎದುರಿನಲ್ಲಿಯೇ ಅಹೋರಾತ್ರಿ ಧರಣಿ ಸತ್ಯಾಗ್ರಹ ಆರಂಭಿಸಲಾಗುತ್ತಿದ್ದು, ಫ್ಯಾಕ್ಟರಿ ಪ್ರಾರಂಭವಾಗುವವರೆಗೂ ನಡೆಯುತ್ತದೆ ಎಂದು ಶಂಕರಗೌಡ ಜಯನಗೌಡ್ರು ತಿಳಿಸಿದರು.




ದೆಹಲಿಯ ರಾಮಲೀಲಾ ಮೈದಾನದಲ್ಲಿ ವೋಟ್ ಚೋರಿ ವಿರೋಧಿಸಿ ಬೃಹತ್ ಪ್ರತಿಭಟನಾ ಸಮಾವೇಶದಲ್ಲಿ ಕೆಪಿಸಿಸಿ ಸಂಯೋಜಕರಾದ ನಿಸಾರಅಮ್ಮದ್ ಖಾಜಿ, ಕಾಂಗ್ರೆಸ್ ಮುಖಂಡರಾದ ಕಮಲಪ್ಪ ಕಟ್ಟಿಮನಿ, ಗಿರೀಶ ದೊಡ್ಡಮನಿ ಹಾಗೂ ಕಾಂಗ್ರೆಸ್ ಮುಖಂಡರಾದ ಹುಲ್ಲಪ್ಪ ಹಳ್ಳೂರ, ತಾ.ಪಂ ಮಾಜಿ ಸದಸ್ಯ ಹನಮಂತ ಪೂಜಾರ, ರೆಹಮಾನ್ ನದಾಫ್ ಮುಂತಾದವರು ಪಾಲ್ಗೊಂಡಿದ್ದರು.

# ಪ್ಯಾರಾ ಸಿಟಿಂಗ್ ಥ್ರೋ ಬಾಲ್ ಚಾಂಪಿಯನ್‌ಶಿಪ್ : ಮಹಿಳೆಯರ ತಂಡಕ್ಕೆ ಗೆಲುವು



**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀಲಂಕಾದ'ಲ್ಲಿ ಆಯೋಜಿಸಲಾಗಿದ್ದ 1ನೇ ಸೌತ್ ಏಷ್ಯಾ ಪ್ಯಾರಾ ಸಿಟಿಂಗ್ ಥ್ರೋಬಾಲ್ ಚಾಂಪಿಯನ್‌ಶಿಪ್‌ನಲ್ಲಿ ಗದಗ ಜಿಲ್ಲೆಯಿಂದ ಮಾಲತಿ ಇನಾಮತಿ ಕ್ಯಾಪ್ಟನ್‌ಶಿಪ್ ಅಡಿಯಲ್ಲಿ ಮಹಿಳೆಯರಿಗೆ ಚಿನ್ನ, ಗದಗ ಪುರುಷರ ವಿಭಾಗದ ಮಹಾಂತೇಶ ಹಾಗೂ ಆನಂದ ತಂಡ ಶ್ರೇಷ್ಠ ಪ್ರದರ್ಶನ ಮಾಡುವ ಮೂಲಕ ಬೆಳ್ಳಿ ಪಡೆದುಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

ವರ್ಲ್ಡ್ ಪ್ಯಾರಾ ಥ್ರೋಬಾಲ್ ಫೆಡರೇಷನ್, ಏಷಿಯನ್ ಪ್ಯಾರಾ ಥ್ರೋಬಾಲ್ ಫೆಡರೇಷನ್ ಮತ್ತು ಶ್ರೀಲಂಕಾ ಪ್ಯಾರಾ ಥ್ರೋ ಬಾಲ್ ಫೆಡರೇಷನ್ ವತಿಯಿಂದ ಫಾದರ್ ಆಫ್ ಥ್ರೋಬಾಲ್ ಆಲ್ಬರ್ಟ್ ಪ್ರೇಮ್ ಕುಮಾರ್ ಅವರ ಮಾರ್ಗದರ್ಶನದಲ್ಲಿ ಈ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು.

ಸಬರಗಮುವಾ ಗವರ್ನರ್ ಚಂಪಾ ಜನಕೀ ರಾಜರತ್ನ, ಶ್ರೀಲಂಕಾ ಪ್ಯಾರಾಲಿಂಪಿಕ್ ಸಮಿತಿಯ ಅಧ್ಯಕ್ಷ ಬ್ರಿಗೇಡಿಯರ್ ದಾನಂಜಯ ಅಲುಡೆನಿಯ, ವರ್ಲ್ಡ್ ಪ್ಯಾರಾ ಥ್ರೋಬಾಲ್ ಫೆಡರೇಷನ್ ಅಧ್ಯಕ್ಷೆ ನಿರ್ಮಲಾ ರಾವತ್ ಮತ್ತಿತ್ತರಿದ್ದರು.

**ಮಹಿಳೆಯರ ವಿಭಾಗ:** ಮಾಲತಿ ಇನಾಮತಿ ಕ್ಯಾಪ್ಟನ್‌ಶಿಪ್ ಅಡಿ ಭಾರತ ತಂಡ ಶ್ರೇಷ್ಠ ಪ್ರದರ್ಶನ ನೀಡಿತು. ಭಾರತ-ನೇಪಾಳ 2.0 ಗೆಲುವಿನಿಂದ ಆರಂಭಿಸಿತು. ಫೈನಲ್ ಪಂದ್ಯವು 3 ಸೀರಿಸ್ ಪಂದ್ಯಗಳ ರೂಪದಲ್ಲಿ ನಡೆಯಿತು (ಪ್ರತಿ ಸೀರಿಸ್ 3 ಪಂದ್ಯಗಳು, ಪ್ರತಿ ಪಂದ್ಯ 21 ಪಾಯಿಂಟ್‌ಗಳು), ಭಾರತ ತಂಡ ಶ್ರೀಲಂಕಾವನ್ನು 2.0 ಅಂತರದಲ್ಲಿ ಸೋಲಿಸಿ ಚಿನ್ನದ ಪದಕ ಹಾಗೂ 1ನೇ ಮಹಿಳಾ ಸೌತ್ ಏಷ್ಯಾ ಪ್ರಶಸ್ತಿಯನ್ನು ಗೆದ್ದಿತು.

**ಪುರುಷರ ವಿಭಾಗ:** ಪುರುಷರ ತಂಡ ಶ್ರೇಷ್ಠ ಪ್ರದರ್ಶನ ನೀಡಿದರೂ, ಫೈನಲ್ ಪಂದ್ಯ ಕೂಡ 3 ಸೀರಿಸ್ ಆಧಾರಿತವಾಗಿದ್ದು, ಆತಿಥೇಯ ಶ್ರೀಲಂಕಾ ತಂಡ 2.1 ಅಂತರದಲ್ಲಿ ಜಯ ಸಾಧಿಸಿತು. ಭಾರತದ ಪುರುಷರ ತಂಡ ಬೆಳ್ಳಿ ಪದಕಕ್ಕೆ ತೃಪ್ತಿ ಪಡಬೇಕಾಯಿತು ಎಂದು ಅಥ್ಲೆಟಿಕ್ ಕೋಚ್ ರಿಚರ್ಡ್ ಧರ್ಮದಾಸ್, ಟ್ರೈನರ್, ರಿಯಾಜ್ ಬಾನಿ ತಿಳಿಸಿದ್ದಾರೆ.

### ವಿವೇಕ ವೇದಿಕೆಯ ಪ್ರಥಮ ವಾರ್ಷಿಕೋತ್ಸವದಲ್ಲಿ ಪೌರಾಯುಕ್ತ ಪವಾರ ಮನವಿ

# ನಗರದ ಸ್ವಚ್ಛತೆಗೆ ನಗರಸಭೆಯೊಂದಿಗೆ ಸಹಕರಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದ ಸ್ವಚ್ಛತೆ ಹಾಗೂ ಸುಂದರೀಕರಣಕ್ಕೆ ನಗರಸಭೆಯೊಂದಿಗೆ ಸರ್ವರೂ ಸಹಕರಿಸಬೇಕೆಂದು ನಗರಸಭೆಯ ಪೌರಾಯುಕ್ತ ರಾಜಾರಾಮ್ ಪವಾರ ಮನವಿ ಮಾಡಿಕೊಂಡರು.

ಅವರು ರವಿವಾರ ಗದುಗಿನ ಪಂಚಾಕ್ಷರಿ ನಗರದ ವಿವೇಕ ವೇದಿಕೆಯ ಪ್ರಥಮ ವಾರ್ಷಿಕೋತ್ಸವವನ್ನು ಉದ್ಘಾಟಿಸಿ ಮಾತನಾಡಿದರು.

ನಗರ ಮತ್ತು ನಾಗರಿಕತೆ ಬೆಳೆದಂತೆ ಸಾರ್ವಜನಿಕರಿಗೆ ಮೂಲಭೂತ ಸೌಲಭ್ಯಗಳನ್ನು ನೀಡುವಲ್ಲಿ ನಗರಸಭೆಯ ಆಡಳಿತ, ಸಿಬ್ಬಂದಿ ವರ್ಗ ಹಗಲಿರುಳು ಶ್ರಮಿಸುತ್ತಿದೆ. ಇದರೊಟ್ಟಿಗೆ ಪ್ರಜ್ಞಾವಂತ ನಾಗರಿಕರೂ ಸಹ ಅವಳಿ ನಗರದ ಸ್ವಚ್ಛತೆ ಹಾಗೂ ಸುಂದರವಾಗಿ ಕಾಣುವಲ್ಲಿ ನಗರಸಭೆಯೊಂದಿಗೆ ಸಹಕರಿಸಬೇಕು ಎಂದರು.

ಮನೆ, ಹೋಟೇಲ್, ಖಾನಾವಳಿಯಿಂದ ಬರುವ ತ್ಯಾಜ್ಯದಲ್ಲಿ ಒಣ ಕಸ, ಹಸಿ ಕಸವನ್ನು ಪ್ರತ್ಯೇಕವಾಗಿ ವಿಂಗಡಿಸಿ ವಾರ್ಡ್‌ನಲ್ಲಿ ಸಂಚರಿಸುವ ನಗರಸಭೆಯ ಕಸ ಸಾಗಣೆಯ ವಾಹನಕ್ಕೆ ಕೊಡಬೇಕು. ಮನೆಯ ಅಂಗಳದ ಮುಂದೆ ಅವಕಾಶವಿದ್ದವರು ನೆಲದಲ್ಲಿ ಸುಮಾರು 4-5 ಅಡಿ ಆಳದಲ್ಲಿ ಪಿವಿಸಿ ಪೈಪ್ ಹಾಕಿ ಅದರಲ್ಲಿ ಕಸ ಹಾಕುತ್ತ ಬರಬೇಕು ತಿಂಗಳ ಬಳಿಕ ಕಸ ಗೊಬ್ಬರವಾಗಿ ಪರಿವರ್ತನೆಯಾಗುತ್ತದೆ. ಅದನ್ನು ತೆಗೆದು ಗಿಡಗಳಿಗೆ ಹಾಕುವ ಪರಿಪಾಠ ಇಟ್ಟುಕೊಳ್ಳಬೇಕು ಎಂದು ಸಲಹೆ ನೀಡಿದರು. ಮುಖ್ಯ ಅತಿಥಿ, ನಿವೃತ್ತ ಪ್ರಾಚಾರ್ಯ ಅನಿಲ ವೈದ್ಯ ಮಾತನಾಡಿ, ನಾವು ನಮ್ಮ ಮನೆಯನ್ನು ಚೊಕ್ಕಟವಾಗಿ ಇಟ್ಟುಕೊಳ್ಳಲು ಕಾಳಜಿ ತೆಗೆದುಕೊಳ್ಳುವಂತೆಯೇ ನಮ್ಮ ಮನೆಯ ಸುತ್ತಮುತ್ತಲಿನ ಪರಿಸರವನ್ನೂ ಅಷ್ಟೇ ಕಾಳಜಿಯಿಂದ ನೋಡಿಕೊಳ್ಳುವದು ಪ್ರಜ್ಞಾವಂತಿಕೆಯ ಲಕ್ಷಣವಾಗಿದೆ. ಅಂತಹ ಕಾರ್ಯಕ್ಕೆ ಅಣಿಗೊಂಡಿರುವ ವಿವೇಕ ವೇದಿಕೆಯ ಕಾರ್ಯ ಶ್ಲಾಘನೀಯ ಎಂದರು.

ನಗರಸಭೆ ಸದಸ್ಯ, ಸ್ಥಾಯಿ ಸಮಿತಿ ಅಧ್ಯಕ್ಷ ಅನಿಲ ಅಬ್ಬಿಗೇರಿ ಮಾತನಾಡಿ, ನಗರಸಭೆಯಿಂದ ಈ ವಾರ್ಡ್‌ನ ಸಾರ್ವಜನಿಕರಿಗೆ ಒದಗಿಸಬೇಕಾದ ಮೂಲಭೂತ ಸೌಲಭ್ಯಗಳನ್ನು ಒದಗಿಸುವಲ್ಲಿ ಪ್ರಯತ್ನಿಸಲಾಗುತ್ತಿದೆ. ಇನ್ನೂ ಕೆಲಸಗಳು, ಬೇಡಿಕೆಗಳು ಇದ್ದಲ್ಲಿ ಅವುಗಳನ್ನು ಕ್ರಮೇಣ ಈಡೇರಿಸಲಾಗುವದು. ಮಾಡಿದ ಕೆಲಸದ ಬಗ್ಗೆ ಸಂತೃಪ್ತಿ ಇದೆ, ಬರಲಿರುವ ದಿನಗಳಲ್ಲಿ ಇನ್ನೂ ಹೆಚ್ಚಿನ ಕೆಲಸ ಮಾಡುವೆ ಎಂದರು.

ಇನ್ನೋರ್ವ ಅತಿಥಿ ಸೋಮಪ್ಪ ರೊಟ್ಟಿ ಮಾತನಾಡಿ, ಈ ಲೇಔಟ್ ಸಾಕಷ್ಟು ಅಭಿವೃದ್ಧಿ ಹೊಂದಿದ್ದು, ಸುಶಿಕ್ಷಿತರನ್ನು ಹೊಂದಿರುವ ಈ ಪ್ರದೇಶದ ಸ್ವಚ್ಛ ಮತ್ತು ಸುಂದರವಾಗಿ ಕಾಣುವಂತೆ ನೋಡಿಕೊಳ್ಳುವದು ಎಲ್ಲರ ಜವಾಬ್ದಾರಿ ಎಂದರು.

ವೇದಿಕೆಯ ಮೇಲೆ ನಿವೃತ್ತ ಪಶುವೈದ್ಯ ಡಾ. ಎಚ್.ಡಿ. ಹೊಸಮನಿ, ವಾಲಿಶೆಟ್ಟರ, ಶಿರೂರ ಅಶೋಕ ಉಪಸ್ಥಿತರಿದ್ದರು. ಸುಶೀಲಾ ಮತ್ತು ಕವಿತಾ ಶಿವನಗೌಡರ ಪ್ರಾರ್ಥಿಸಿದರು, ಕಾರ್ಯದರ್ಶಿ ಎಂ.ಡಿ. ವಡವಿ ಸ್ವಾಗತಿಸಿದರು, ವ್ಹಿ.ಬಿ. ಗಡದರ ಪ್ರಾಸ್ತಾವಿಕವಾಗಿ ಮಾತನಾಡಿದರು, ಎಂ.ಎಂ. ಹುಬ್ಬಳ್ಳಿ ವರದಿ ವಾಚಿಸಿದರು, ಎಫ್.ಎಸ್. ಸಿಂಧಗಿ ಹಾಗೂ ಎಸ್.ಬಿ. ಸಜ್ಜನರ ಸಂಘಟನೆ ಕುರಿತು ಮಾತನಾಡಿದರು. ಯು. ಎಸ್. ನಿಪ್ಪಾಣಿಕರ ನಿರೂಪಿಸಿದರು. ಕೊನೆಗೆ ಎಸ್.ಸಿ. ಪೊಲೀಸ್‌ಪಾಟೀಲ ವಂದಿಸಿದರು.



ಅಧ್ಯಕ್ಷತೆ ವಹಿಸಿದ್ದ ವಿವೇಕ ವೇದಿಕೆಯ ಅಧ್ಯಕ್ಷ ಪಿ.ಎ. ಕುಲಕರ್ಣಿ ಮಾತನಾಡಿ, ಈ ಪ್ರದೇಶದ ಸಮಗ್ರ ಅಭಿವೃದ್ಧಿಗೆ ವೇದಿಕೆಯ ಸರ್ವ ಪದಾಧಿಕಾರಿಗಳು, ಸದಸ್ಯರು ಕಂಕಣಬದ್ಧರಾಗಿ ಕಾರ್ಯ ನಿರ್ವಹಿಸುತ್ತಿದ್ದು, ಬರಲಿರುವ ದಿನಗಳಲ್ಲಿ ವೇದಿಕೆಯಿಂದ ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ ಮತ್ತು ವೈಚಾರಿಕ ಕಾರ್ಯಕ್ರಮಗಳನ್ನು ರೂಪಿಸಲಾಗುವದು. ವಿಶೇಷವಾಗಿ ಮಹಿಳಾ ಸಂಘಟನೆಯನ್ನು ಹುಟ್ಟುಹಾಕುವ ಉದ್ದೇಶ ಹೊಂದಲಾಗಿದೆ. ನಗರಸಭೆಯಿಂದ ಸುಂದರವಾದ ಉದ್ಯಾನ ನಿರ್ಮಾಣಗೊಳ್ಳಲಿದ್ದು, ಎಲ್ಲರೂ ಸಂಘಟನೆಯಲ್ಲಿ ಒಂದಾಗಿ ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka